# ಧೈರ್ಯದ ದಾರಿ

ನಿಮ್ಮ ನಂಬಿಕೆಯ ಧ್ವನಿ

DAIRYADA DAARI NEWS PAPER

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

EMAIL : dairyadadaari@gmail.com

ಸಂಪುಟ: 01 ಸಂಚಿಕೆ: 82

ಬೆಲೆ ರೂ : 2.00

ರಾಯಚೂರು

ಪುಟ: 4

RNI NO: KNKAN/25/A2795

ಗುರುವಾರ: 05-03-2026


**SEHRI & IFTARI TIME**

DAY : THURSDAY

RAMZAN : 15

DATE: 05.03.2026

END TIME OF SEHRI :5:21 AM

FAJAR AZAAN : 5:26 AM

IFTAR TIME : 6:31 PM



ಸೈಯದ್ ಅಹ್ಮದ್ ಹುಸೇನಿ ಮತ್ ವಾಲೆ
ಕಾರ್ಯದರ್ಶಿಗಳು : ಮತ್ ವಾಲೆ
ಸಾಹೇಬ್ ಪಬ್ಲಿಕ್ ಸ್ಕೂಲ್ ಮಾನ್ವಿ
ಸಂಪಾದಕರು : ಧೈರ್ಯದ ದಾರಿ ಕನ್ನಡ
ದಿನಪತ್ರಿಕೆ


ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626


# ಕೆಪಿಎಸ್‌ಸಿ ನೇಮಕಾತಿ ಪಟ್ಟಿ ಗೊಂದಲ ಕೆಎಎಸ್ ಪರೀಕ್ಷೆಯಲ್ಲಿ ಅಕ್ರಮದ ವಾಸನೆ

**ಬೆಂಗಳೂರು,ಮಾ.4–** ಸದಾ ಒಂದಿಲ್ಲೊಂದು ವಿವಾದಗಳಿಂದಲೇ ರಾಜ್ಯಾದ್ಯಂತ ಮನೆ ಮಾತಾಗಿರುವ ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ) ಕೆಎಎಸ್ ನೇಮಕಾತಿಗೆ ನಡೆಸಿದ ಮುಖ್ಯ ಪರೀಕ್ಷೆಯಲ್ಲಿ ಅಕ್ರಮದ ವಾಸನೆ ಕಂಡುಬಂದಿದೆ.

ಆದರೆ ಕೆಪಿಎಸ್‌ಸಿ ಈ ಆರೋಪವನ್ನು ಸಾರಾಸಗಾಟಾಗಿ ತಳ್ಳಿ ಹಾಕಿದೆ.ಪರೀಕ್ಷೆ ಬರೆದಿದ್ದ ಅನೇಕ ವಿದ್ಯಾರ್ಥಿಗಳು ಕೆಎಎಸ್ ಮುಖ್ಯ ಪರೀಕ್ಷೆಯಲ್ಲಿ ಅಕ್ರಮ ನಡೆದಿದ್ದು, ತಕ್ಷಣವೇ ಪ್ರಧಾನಿ ನರೇಂದ್ರಮೋದಿ ಅವರು ಮಧ್ಯಪ್ರವೇಶಿಸಿ ನ್ಯಾಯ ಒದಗಿಸಬೇಕೆಂದು ಸಾಮಾಜಿಕ ಜಾಲತಾಣದಲ್ಲಿ ಅಭಿಯಾನ ಆರಂಭಿಸಿದ್ದಾರೆ.ನಿವೃತ್ತ ಐಪಿಎಸ್ ಅಧಿಕಾರಿ ಹಾಗೂ ಬಿಜೆಪಿ ಮುಖಂಡ ಭಾಸ್ಕರ್ ರಾವ್ ಕೂಡ ವಿದ್ಯಾರ್ಥಿಗಳ ಹೋರಾಟಕ್ಕೆ ಕೈ ಜೋಡಿಸಿದ್ದಾರೆ. ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದು, ಕೆಪಿಎಸ್‌ಸಿ ಹಗರಣದ ಬಗ್ಗೆ ನಿರಂತರವಾಗಿ ಬರುತ್ತಿರುವ ಸುದ್ದಿಗಳು ಕಳವಳ ಎಂದಿದ್ದಾರೆ.




ಅಧಿಕಾರಿಗಳನ್ನು ನೇಮಿಸುವ ಜವಾಬ್ದಾರಿಯುತ ರಾಜ್ಯದ ಪ್ರಮುಖ ಸಂಸ್ಥೆಯೇ ವಂಚನೆ ಮತ್ತು ಪ್ರಶ್ನೆಪತ್ರಿಕೆ ಸೋರಿಕೆಯ ಆರೋಪ ಎದುರಿಸಿದರೆ, ಸಾರ್ವಜನಿಕರು ಸಂಪೂರ್ಣವಾಗಿ ನಂಬಿಕೆ ಕಳೆದುಕೊಳ್ಳುತ್ತಾರೆ ಎಂದು ತಿಳಿಸಿದ್ದಾರೆ.
ಜೊತೆಗೆ ಪದೇ ಪದೇ ನಡೆಯುತ್ತಿರುವ ಅಕ್ರಮಗಳು ಪರಿಶ್ರಮ ಮಾಡಿದ ವಿದ್ಯಾರ್ಥಿಗಳ ಕನಸುಗಳಿಗೆ ಕೊಳ್ಳಿ ಇಡುತ್ತಿವೆ ಎಂದು ಹೇಳಿದ್ದಾರೆ.ಇದು ಕೇವಲ ಆಡಳಿತ ದೋಷವಲ್ಲ. ವ್ಯವಸ್ಥೆಯಲ್ಲೆ? ದೊಡ್ಡ ದೋಷಗಳಿವೆ. ಸರ್ಕಾರ ತಕ್ಷಣ ಕಠಿಣ ಕ್ರಮ ಕೈಗೊಳ್ಳಬೇಕು. ಪಾರದರ್ಶಕ ಮತ್ತು ಸುರಕ್ಷಿತ ವ್ಯವಸ್ಥೆ ತರಬೇಕು. ಯುಪಿಎಸ್‌ಸಿ ಮಾದರಿಯಲ್ಲಿ ತಂತ್ರಜ್ಞಾನ ಆಧಾರಿತ ಭದ್ರತೆ ಜಾರಿಗೆ ತರಬೇಕು ಎಂದು ಒತ್ತಾಯಿಸಿದ್ದಾರೆ.

ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ನೀಡಿದರೆ ಮಾತ್ರ ಭವಿಷ್ಯದಲ್ಲಿ ಇಂತಹ ಅಕ್ರಮಗಳು ಕಡಿಮೆಯಾಗುತ್ತವೆ. ಇಲ್ಲದಿದ್ದರೆ ಯುವಕರ ನಂಬಿಕೆ ಸಂಪೂರ್ಣವಾಗಿ ಕುಸಿಯುವ ಸಾಧ್ಯತೆ ಇದೆ ಎಂದು ಎಚ್ಚರಿಸಿದ್ದಾರೆ.

**ಅಭ್ಯರ್ಥಿಗಳ ಆರೋಪವೇನು?:** ಕೆಪಿಎಸ್‌ಸಿ ನಡೆಸಿದ ಕೆಎಎಸ್ ಮುಖ್ಯ ಪರೀಕ್ಷೆಯ ವೇಳೆ ಒಂದೇ ರೂಂನಲ್ಲಿದ್ದ ಪರೀಕ್ಷೆ ಬರೆದ 15 ಮಂದಿ ಆಯ್ಕೆಯಾಗಿದ್ದಾರೆ ಎಂಬುದು ಅನುಮಾನಕ್ಕೆ ಕಾರಣವಾಗಿದೆ. ಇದು ಸಾಮಾನ್ಯ ವಿಷಯವಲ್ಲ 2ನೇಪುಟಕ್ಕೆ

## ಸಿರವಾರ: ಆರನೇ ವಾರ್ಡ್‌ನಲ್ಲಿ ಚರಂಡಿ ಅವ್ಯವಸ್ಥೆ ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಸಾರ್ವಜನಿಕರ ಆಕ್ರೋಶ

ಧೈರ್ಯದ ದಾರಿ

**ಸಿರುವಾರ:** ಪಟ್ಟಣದ ಪ್ರಮುಖ ಚರಂಡಿ ವ್ಯವಸ್ಥೆ ಹೊಂದಿರುವ ಆರನೇ ವಾರ್ಡ್‌ನಲ್ಲಿ ಕಳೆದ ಹಲವು ದಿನಗಳಿಂದ ಚರಂಡಿ ಬ್ಲಾಕ್ ಆಗಿದ್ದು, ಸಾರ್ವಜನಿಕರು ದುರ್ವಾಸನೆ ಹಾಗೂ ಸಾಂಕ್ರಾಮಿಕ ರೋಗಗಳ ಭೀತಿಯಲ್ಲಿ ಬದುಕುವಂತಾಗಿದೆ.
ಸಮಸ್ಯೆಯ ಮೂಲವೇನು?
ಗುಡ್ಡದ ಪ್ರದೇಶದಿಂದ ಹರಿದು ಬರುವ ಚರಂಡಿ ನೀರು, ಹಲಗುಂಬ ಹತ್ತುವ ಸ್ಥಳದ ಮೂಲಕ ಹಾದು ಗದ್ದೆ ಹಳ್ಳದವರೆಗೆ ತಲುಪುತ್ತದೆ. ಇದು ಪಟ್ಟಣದ ಪ್ರಮುಖ ನೀರು ಹರಿವಿನ ಮಾರ್ಗವಾಗಿದ್ದರೂ, ಇಲ್ಲಿ ಸರಿಯಾದ ಹೂಳೆತ್ತುವ ಕಾರ್ಯ ನಡೆಯುತ್ತಿಲ್ಲ. ಬೆಟ್ಟದ ಕಡೆಯಿಂದ ಬರುವ ಹೂಳು ಮತ್ತು ಕಸಕಡ್ಡಿಗಳು ಚರಂಡಿಯಲ್ಲಿ ಶೇಖರಣೆಯಾಗುತ್ತಿರುವುದರಿಂದ ನೀರಿನ ಸರಾಗ ಹರಿವಿಗೆ ಅಡ್ಡಿಯುಂಟಾಗಿದೆ.
**ಸಾರ್ವಜನಿಕರ ಬೇಡಿಕೆ ಮತ್ತು ಅಧಿಕಾರಿಗಳ ನಿರ್ಲಕ್ಷ್ಯ**
ಈ ಮುಖ್ಯ ಚರಂಡಿಯನ್ನು ವಾರಕ್ಕೊಮ್ಮೆಯಾದರೂ ಸ್ವಚ್ಛಗೊಳಿಸಬೇಕು ಎಂಬುದು ಸ್ಥಳೀಯರ ಬಲವಾದ ಆಗ್ರಹವಾಗಿದೆ. ಆದರೆ, ಸಂಬಂಧಪಟ್ಟ ಪುರಸಭೆ ಅಥವಾ ಪಟ್ಟಣ ಪಂಚಾಯಿತಿ ಅಧಿಕಾರಿಗಳು ಈ ಬಗ್ಗೆ ಕನಿಷ್ಠ ಗಮನವನ್ನೂ ಹರಿಸುತ್ತಿಲ್ಲ ಎಂದು ನಾಗರಿಕರು ದೂರಿದ್ದಾರೆ.
"ಮಳೆ ಬಂದರೆ ಅಥವಾ ಗುಡ್ಡದಿಂದ ನೀರು ಹೆಚ್ಚಾಗಿ ಹರಿದು ಬಂದರೆ ಚರಂಡಿ ತುಂಬಿ ರಸ್ತೆಯ ಮೇಲೆ ಹರಿಯುತ್ತದೆ. ಇದು ಗದ್ದೆ ಹಳ್ಳದವರೆಗೂ ಹರಡುತ್ತಿದ್ದು, ರೈತರಿಗೂ ಮತ್ತು ನಿವಾಸಿಗಳಿಗೂ ತೊಂದರೆಯಾಗುತ್ತಿದೆ. ಅಧಿಕಾರಿಗಳಿಗೆ ಹಲವು



ಬಾರಿ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ," ಎಂದು ಸ್ಥಳೀಯ ನಿವಾಸಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕೇವಲ ಚರಂಡಿ ನಿರ್ಮಾಣ ಮಾಡಿದರೆ ಸಾಲದು, ಅದರ ನಿರ್ವಹಣೆಯೂ ಮುಖ್ಯ. ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದ ಅಧಿಕಾರಿಗಳು ತಕ್ಷಣವೇ ಎಚ್ಚೆತ್ತುಕೊಂಡು ಈ ಪ್ರಮುಖ ಚರಂಡಿಯ ಹೂಳೆತ್ತಿಸಿ, ನೀರಿನ ಸರಾಗ ಹರಿವಿಗೆ ಅನುವು ಮಾಡಿಕೊಡಬೇಕಿದೆ. ಎಂದು ಸಾರ್ವಜನಿಕರ ಒತ್ತಾಯವಾಗಿದೆ.

## ಸಿರವಾರ ಸರ್ಕಾರಿ ಪ್ರೌಢಶಾಲೆಯಲ್ಲಿ 10ನೇ ತರಗತಿ ವಿದ್ಯಾರ್ಥಿಗಳ 'ಬೀಳ್ಕೊಡುಗೆ ಮತ್ತು ಶುಭ ಹಾರೈಕೆ' ಸಮಾರಂಭ

ಧೈರ್ಯದ ದಾರಿ

**ಸಿರವಾರ:** ಪಟ್ಟಣದ ಸರ್ಕಾರಿ ಪ್ರೌಢಶಾಲೆಯಲ್ಲಿ 10ನೇ ತರಗತಿಯ ವಿದ್ಯಾರ್ಥಿಗಳಿಗಾಗಿ ಹಮ್ಮಿಕೊಳ್ಳಲಾಗಿದ್ದ 'ಬೀಳ್ಕೊಡುಗೆ ಹಾಗೂ ಹಾರೈಕೆ' ಸಮಾರಂಭವು ಅತ್ಯಂತ ಸಂಭ್ರಮ ಮತ್ತು ಭಾವನಾತ್ಮಕವಾಗಿ ಜರುಗಿತು.
ದೀಪ ಬೆಳಗಿಸಿ ಚಾಲನೆ ನೀಡಿದ ಎಸ್‌ಡಿಎಂಸಿ ಅಧ್ಯಕ್ಷರು
ಶಾಲಾ ಅಭಿವೃದ್ಧಿ ಮತ್ತು ಮೇಲ್ವಿಚಾರಣಾ ಸಮಿತಿಯ (ಖಆಒಅ) ಅಧ್ಯಕ್ಷರಾದ ಎಂ. ಡಿ ರಫಿ ಅವರು ಕಾರ್ಯಕ್ರಮವನ್ನು ದೀಪ ಬೆಳಗಿಸುವ ಮೂಲಕ ಅಧಿಕೃತವಾಗಿ ಉದ್ಘಾಟಿಸಿದರು. ನಂತರ ಮಾತನಾಡಿದ ಅವರು, "ವಿದ್ಯಾರ್ಥಿ ಜೀವನದಲ್ಲಿ ಹತ್ತನೇ ತರಗತಿಯು ಅತ್ಯಂತ ಪ್ರಮುಖ ಘಟ್ಟವಾಗಿದೆ. ಇಲ್ಲಿ ನೀವು ಕಲಿತ ಶಿಸ್ತು ಮತ್ತು ಜ್ಞಾನವು ನಿಮ್ಮ ಭವಿಷ್ಯದ ಬದುಕಿಗೆ ಭದ್ರ ಬುನಾದಿಯಾಗಲಿದೆ. ಮುಂಬರುವ ಪರೀಕ್ಷೆಯನ್ನು ಯಾವುದೇ ಭಯವಿಲ್ಲದೆ ಎದುರಿಸಿ, ಶಾಲೆಗೆ ಹಾಗೂ ಪೋಷಕರಿಗೆ ಕೀರ್ತಿ ತರಬೇಕು" ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಶಿಕ್ಷಕರಿಂದ ಪರೀಕ್ಷಾ ಯಶಸ್ಸಿನ ಮಂತ್ರ:ಶಾಲೆಯ ಶಿಕ್ಷಕ ವೃಂದದವರು ವಿದ್ಯಾರ್ಥಿಗಳಿಗೆ ಪರೀಕ್ಷಾ ಪೂರ್ವ ಸಿದ್ಧತೆಯ ಕುರಿತು ಅಮೂಲ್ಯ ಸಲಹೆಗಳನ್ನು ನೀಡಿದರು. "ಕೇವಲ ಅಂಕಗಳಿಗಾಗಿ ಓದದೆ ಜ್ಞಾನಕ್ಕಾಗಿ ಓದಿರಿ. ಪರೀಕ್ಷಾ ಕೇಂದ್ರದಲ್ಲಿ ಧೈರ್ಯದಿಂದ ಕುಳಿತು ಪ್ರಶ್ನೆ ಪತ್ರಿಕೆಯನ್ನು ಸರಿಯಾಗಿ



ಅರ್ಥೈಸಿಕೊಂಡು ಉತ್ತರಿಸಿ. ನಿಮ್ಮ ಸತತ ಪರಿಶ್ರಮಕ್ಕೆ ಖಂಡಿತ ಯಶಸ್ಸು ಲಭಿಸಲಿದೆ" ಎಂದು ಹಾರೈಸುತ್ತಾ, ವಿದ್ಯಾರ್ಥಿಗಳ ಮುಂದಿನ ಉನ್ನತ ಶಿಕ್ಷಣಕ್ಕೆ ಶುಭ ಕೋರಿದರು.
ಭಾವನಾತ್ಮಕ ಕ್ಷಣಗಳಿಗೆ ಸಾಕ್ಷಿಯಾದ ಶಾಲೆ:ಬೀಳ್ಕೊಡುಗೆಯ ಸಂದರ್ಭದಲ್ಲಿ ಶಾಲೆಯಲ್ಲಿ ಕಳೆದ ಸುಂದರ ಕ್ಷಣಗಳನ್ನು ನೆನೆದು ಅನೇಕ ವಿದ್ಯಾರ್ಥಿಗಳು ಭಾವುಕರಾದರು. ಕಿರಿಯ ವಿದ್ಯಾರ್ಥಿಗಳು ತಮ್ಮ ಹಿರಿಯ ವಿದ್ಯಾರ್ಥಿಗಳಿಗೆ ಸಿಹಿ ಹಂಚಿ, ಶುಭ ಹಾರೈಸುವ ಮೂಲಕ ಆತ್ಮೀಯವಾಗಿ ಬೀಳ್ಕೊಟ್ಟರು.
ಗಣ್ಯರ ಉಪಸ್ಥಿತಿ:ಈ ಸಂದರ್ಭದಲ್ಲಿ ಶಾಲಾ ಅಭಿವೃದ್ಧಿ ಸಮಿತಿಯ ಸದಸ್ಯರು, ಮುಖ್ಯೋಪಾಧ್ಯಾಯರು, ಶಿಕ್ಷಕ ವೃಂದ, ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಕೊಂಡಯ್ಯ ನಾಯಕರವರಿಂದ ನೀರಿನ ಅರವಟ್ಟಿಗೆ ಪ್ರಾರಂಭ




ಧೈರ್ಯದ ದಾರಿ

**ಮಾನ್ವಿ :** ಇಂದು ನಮ್ಮ ಪಟ್ಟಣದ ಅತ್ಯಂತ ಮಹತ್ವದ ದಿನಗಳಲ್ಲೊಂದು. ಬೇಸಿಗೆಯ ಬಿರುಬಿಸಿಲಿನ ಝಳವನ್ನು ಸಹಿಸಲಾರದೆ ನರಳುವ ಜನತೆಗಾಗಿ ನೀರಿನ ದಾಹವನ್ನು ತಣಿಸಲು ಇಂತ ಸಾಮಾಜಿಕ ಸೇವೆಯನ್ನು ಮಾಡುತ್ತಿದ್ದು ಒಳ್ಳೆಯ ಕಾರ್ಯ ಎಂದು ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾದ ಜಿಲ್ಲಾಧ್ಯಕ್ಷರಾದ ರಾಮಣ್ಣ ನಾಯಕ ಉದ್ಘಾಟಿಸಿ ಮಾತನಾಡಿದರು. ಪಟ್ಟಣದ ಸಂತೆ ಮಾರ್ಕೆಟಿನಲ್ಲಿ ಬುಧುವಾರದಂದು ಕೊಂಡಯ್ಯ ನಾಯಕ ಪ್ರಧಾನ ಕಾರ್ಯದರ್ಶಿ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾದ ವತಿಯಿಂದ ಪ್ರಾರಂಭವಾಗಿದ್ದು ಶ್ಲಾಘನೀಯ ಕಾರ್ಯ ಎಂದು ಹೇಳಿದರು.ಆಂಜನೇಯ ನಸಲಾಪುರ ಮಾತನಾಡಿ

ಬೇಸಿಗೆ ಎಂದರೆ ಬರೀ ಸೆಖೆ ಮಾತ್ರವಲ್ಲ, ನೀರಿನ ಕೊರತೆಯಿಂದ ಜನರು ಪಡುವ ಕಷ್ಟವೂ ಹೌದು. ವಿಶೇಷವಾಗಿ ಕಾರ್ಮಿಕರು, ರಿಕ್ಷಾ ಚಾಲಕರು, ಪಾದಚಾರಿಗಳು ಮತ್ತು ವ್ಯಾಪಾರಸ್ಥರು ಬಿಸಿಲಿನ ಝಳಕ್ಕೆ ಸಿಲುಕಿ ಬಾಯಾರಿಕೆಯಿಂದ ನರಳುವುದನ್ನು ನಾವು ಕಣ್ಣಾರೆ ಕಂಡಿದ್ದೇವೆ. ಈ ಸಮಸ್ಯೆಗೆ ಸ್ಪಂದಿಸುವ ಸದುದ್ದೇಶದಿಂದ, ಕೊಂಡಯ್ಯ ನಾಯಕರ ಪುಟ್ಟ ಪ್ರಯತ್ನವೇ ಈ ನೀರಿನ ಅರವಟ್ಟಿಗೆ. ಇಲ್ಲಿ ಯಾವುದೇ ವ್ಯಕ್ತಿ, ಜಾತಿ, ಧರ್ಮ, ವರ್ಗದ ಭೇದವಿಲ್ಲದೆ ಎಲ್ಲರೂ ನೀರು ಕುಡಿಯಬಹುದು. ಇದು ಮಾನವೀಯತೆಯ ಸಂಕೇತ ಎಂದು ಹೇಳಿದರು. ಸಾಜೀದ್ ಪಾಷಾ ಮಾತನಾಡಿ ಸಂತೆ ಮಾರ್ಕೆಟ್ ಅಲ್ಲಿ ನೀರಿನ ಅರವಟ್ಟಿಗೆ ಪ್ರಾರಂಭ ಮಾಡಿದ್ದೂ ತುಂಬಾ ಒಳ್ಳೆಯ ಬೆಳವಣಿಗೆಯಾಗಿದೆ. ಸಂತೆಗೆ ಬರುವ ಸಾರ್ವಜನಿಕರಿಗೆ ಕುಡಿಯುವ ನೀರು ತುಂಬಾ ಅನುಕೂಲವಾಗುತ್ತದೆ ಎಂದು ಹೇಳಿದರು. ಈ ಕಾರ್ಯಕ್ರಮದಲ್ಲಿ ನಾಯ್ಡು ನಾಯಕ, ದೇವರಾಜ್ ನಾಯಕ ಅಧ್ಯಕ್ಷರು ಕ.ವಾ.ನಾ.ಮ. ಮಾನ್ವಿ, ಬಸವರಾಜ್ ಸ್ವಾಮಿ, ಮಂಜುನಾಥ ನಾಯಕ, ಉಪೇಂದ್ರ ನಾಯಕ, ವಿರೇಶ ನಾಯಕ, ಚನ್ನಬಸವ ಸ್ವಾಮಿ ಅಧ್ಯಕ್ಷರು ನೆರಳು ಅನಾಥಶ್ರಮ ಮಾನ್ವಿ, ಬಸವ ನಾಯಕ,ರಾಜ್ ನಾಯಕ, ಬಸವ ನಾಯಕ, ಶಿವರಾಯ ನಾಯಕ, ಹನುಮೇಶ್ ನಾಯಕ ಸುರೇಶ ನಾಯಕ, ವಿಜಯ್ ನಾಯಕ ಮುಂತಾದವರು ಉಪಸ್ಥಿತರಿದ್ದರು.

## ಬೇಸಿಗೆಯ ಉಷ್ಣತೆ ಏರಿಕೆ ಹಿನ್ನೆಲೆ: ಆರೋಗ್ಯ ಇಲಾಖೆಯಿಂದ ಸಾರ್ವಜನಿಕರಿಗೆ ಸಲಹೆಗಳು

ಧೈರ್ಯದ ದಾರಿ

**ರಾಯಚೂರು ಮಾ,04–** ಬೇಸಿಗೆ ಆರಂಭವಾಗಲಿದ್ದು, ಪ್ರಸಕ್ತ ವರ್ಷ ಬಿಸಿಲಿನ ತಾಪಮಾನವು ಹೆಚ್ಚಾಗುವ ಸಂಭವವಿದೆ ಎಂದು ಭಾರತೀಯ ಹವಮಾನ ಇಲಾಖೆಯ ನಿರಂತರ ಮುನ್ಸೂಚನೆ ಇರುವುದರಿಂದ ಆರೋಗ್ಯದ ಮೇಲೆ ಬೀರುವ ದುಷ್ಪರಿಣಾಮ ಹಾಗೂ ಅವುಗಳ ಮುಂಜಾಗ್ರತಾ ಕ್ರಮಗಳ ಬಗ್ಗೆ ಜಿಲ್ಲೆಯಲ್ಲಿ ಸಾರ್ವಜನಿಕರು ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಸುರೇಂದ್ರ ಬಾಬು ಅವರು ಜಿಲ್ಲೆಯ ಸಾರ್ವಜನಿಕರಲ್ಲಿ ಕೋರಿದ್ದಾರೆ.

ಬಿಸಿಲಿನ ತಾಪಮಾನದಿಂದ ಹೇಗೆ ರಕ್ಷಿಸಿಕೊಳ್ಳಬೇಕು. ಮತ್ತು ಬಿಸಿಲಿನ ಬೇಗೆಯಿಂದ ಶಾಖಾಘಾತಕ್ಕೊಳಗಾದಾಗ ತಕ್ಷಣ ಕೈಗೊಳ್ಳಬೇಕಾದ ಮುಂಜಾಗೃತೆ ಬಗ್ಗೆ ಜಿಲ್ಲಾ ವಿಪತ್ತು ನಿರ್ವಹಣ ಪ್ರಾಧಿಕಾರದ ನಿರ್ದೇಶನ ಹಾಗೂ ಹವಮಾನ ಬದಲಾವಣೆ ಮತ್ತು ಮಾನವ ಆರೋಗ್ಯ ಕಾರ್ಯಕ್ರಮದ ಮಾರ್ಗದರ್ಶನದಂತೆ ಈ ಕೆಳಕಂಡಂತೆ ಜಾಗೃತಿ ವಹಿಸಲು ಕೋರಲಾಗಿದೆ.

**ಏನು ಮಾಡಬೇಕು:** ಮನೆಯ ಹೊರಗೆ ಹೋಗುವಾಗ ಸಡಿಲವಾದ, ತೆಳು ಬಣ್ಣದ ಹತ್ತಿಯ ಬಟ್ಟೆ ಧರಿಸಬೇಕು. ಕೈಗೆಟುಕುವಂತೆ ಕುಡಿಯುವ ನೀರನ್ನು ಇಟ್ಟುಕೊಳ್ಳಿ. ಆಗಾಗ್ಗೆ ನಿಧಾನವಾಗಿ ಧಾರಾಳವಾಗಿ ಉಪ್ಪು, ಸಕ್ಕರೆ ಮಿಶ್ರಿತ ನೀರನ್ನು ಕುಡಿಯಿರಿ. ಹಣ್ಣಿನ ರಸ, ಪಾನಕಗಳನ್ನು ಕುಡಿಯಿರಿ. ಹತ್ತಿಯ ನುಣುಪಾದ ಬಟ್ಟೆ, ಕರವಸ್ತ್ರ ಟಿಶ್ಯು ಪೇಪರ್‌ನಿಂದ ಬೆವರನ್ನು ಒರೆಸಿಕೊಳ್ಳಬೇಕು. ನೀರು, ಮಜ್ಜಿಗೆ ಎಳೆನೀರು ಕುಡಿಯಬಹುದು. ಆದಷ್ಟು ಮಸಾಲೆ ರಹಿತ, ಶುದ್ಧ ಆಹಾರ ಸೇವಿಸಬೇಕು. ಗಾಳಿಯಾಡುವಂತಹ ಪಾದರಕ್ಷೆ ಧರಿಸಿರಿ. ಮನೆಯಿಂದ ಹೊರಗಡೆ ಹೋಗುವಾಗ ಜೊತೆಯಲ್ಲಿ ತಪ್ಪದೇ ಶುದ್ಧ ಕುಡಿಯುವ ನೀರನ್ನು ತೆಗೆದುಕೊಂಡು ಹೋಗಬೇಕು.

ವ್ಯಕ್ತಿ ತೊದಲು ಮಾತು ಅಥವಾ ಅರ್ಥರಹಿತವಾಗಿ ಬಡಬಡಿಸಿದ್ದಲ್ಲಿ, ಕೂಡಲೇ ನೆರಳಿನ ಪ್ರದೇಶಕ್ಕೆ ಸ್ಥಳಾಂತರಿಸಿರಿ. ಕೆಳಗೆ ಮಲಗಿಸಿ, ಕಾಲುಗಳನ್ನು ಮೇಲಕೆತ್ತಿ ಆರೈಕೆ ಮಾಡಿ. ಆತ/ಆಕೆಯ ಹಣೆ, ಕತ್ತು, ಪಾದ ತೊಡೆಯ ಸಂದುಗಳನ್ನು ಒದ್ದೆ ಬಟ್ಟೆಯಿಂದ ಒರೆಸಿರಿ (ತಂಪಾದ ಅಥವಾ ಐಸ್ ನೀರಿನಿಂದ ಒರೆಸಬೇಡಿ) ಚರ್ಮ ಕೆಂಪಾದರೆ, ಬೆವರು ಕಡಿಮೆಯಾದರೆ,



ದೇಹದ ಉಷ್ಣತೆ ಜಾಸ್ತಿಯಾದರೆ, ದೀರ್ಘವಾದ ತೀವ್ರ ಉಸಿರಾಟವಿದ್ದಲ್ಲಿ ತುರ್ತಾಗಿ ವೈದ್ಯರನ್ನು ಸಂಪರ್ಕಿಸಬೇಕು.

ಬೇಸಿಗೆಯಲ್ಲಿ ಕಲುಷಿತ ನೀರಿನ ಸೇವನೆಯಿಂದ ಸಂಭಾವ್ಯ ವಾಂತಿ–ಬೇಧಿ ಪ್ರಕರಣಗಳು ಉಂಟಾಗುವ ಹಿನ್ನಲೆಯಲ್ಲಿ ಶುದ್ಧೀಕರಿಸಿದ ನೀರು ಅಥವಾ ನೀರು ಶುದ್ಧೀಕರಣ ಘಟಕದ ನೀರನ್ನು ಕುಡಿಯಲು ಬಳಸಬೇಕು. ಕೈಗಳನ್ನು ಸಾಬೂನು ಮತ್ತು ನೀರಿನಿಂದ 45 ಸೆಕೆಂಡ್‌ಗಳ ಕಾಲ ತೊಳೆದ ನಂತರ ಆಹಾರ ಸೇವಿಸಬೇಕು. ನೀರಿನ ಸಂಗ್ರಹಣಗಳ ಮೇಲೆ ತಪ್ಪದೇ ಮುಚ್ಚಳ ಮುಚ್ಚಬೇಕು. ಮಲ, ಮೂತ್ರ ವಿಸರ್ಜನೆಗಾಗಿ ಶೌಚಾಲಯ ಬಳಸಬೇಕು. ಸುರಕ್ಷಿತ ಆಹಾರ ಮಾತ್ರ ಸೇವಿಸಿ, ಆದಷ್ಟು ಮನೆಯಲ್ಲಿ ತಯಾರಿಸಿದ ಆಹಾರಕ್ಕೆ ಆದ್ಯತೆ ನೀಡಬೇಕು.

**ಏನು ಮಾಡಬಾರದು:** ಬಿಗಿಯಾದ, ಗಾಢ ಬಣ್ಣದ, ಸಿಂಥೆಟಿಕ್ ಬಟ್ಟೆ ಧರಿಸಬಾರದು. ಕುಷನ್‌ಯುಕ್ತ ಕುರ್ಚಿಯಲ್ಲಿ ಸತತವಾಗಿ ಕೂಡಬಾರದು. ಸೋಡಾ ಇತ್ಯಾದಿ ಕಾರ್ಬೋನೇಟೆಡ್ ತಂಪು ಪಾನಿಯಗಳನ್ನು ಕುಡಿಯಬೇಡಿ (ಬಾಯಾರಿಕೆಯಾದಾಗ ಕಡ್ಡಾಯವಾಗಿ ನೀರು ಕುಡಿಯಬೇಕು). ಬೆವರನ್ನು ಒರೆಸಲು ಒರಟಾದ ಬಟ್ಟೆಯನ್ನು ಉಪಯೋಗಿಸಬೇಡಿ. ಕಾಫಿ, ಟೀ, ಅತಿ

2ನೇಪುಟಕ್ಕೆ►

ಮೊದಲನೇ ಪುಟದಿಂದ

# ಕೆಪಿಎಸ್‌ಸಿ ನೇಮಕಾತಿ ಪಟ್ಟಿ ಗೊಂದಲ ಕೆಎಎಸ್ ಪರೀಕ್ಷೆಯಲ್ಲಿ ಅಕ್ರಮದ ವಾಸನೆ

ಎಂದು ಹೇಳುತ್ತಿದ್ದಾರೆ. ಆದರೆ ಇನ್ನಷ್ಟು ವಿದ್ಯಾರ್ಥಿಗಳು, ನಾವು ಉತ್ತಮವಾಗಿ ಪರೀಕ್ಷೆ ಬರೆದಿದ್ದೇವೆ. ಆದರೆ ಆಯ್ಕೆ ಆಗಿಲ್ಲ. ಫಲಿತಾಂಶದಲ್ಲಿ ಏನೋ ಗೊಂದಲ ಇದೆ ಎಂದು ಹೇಳುತ್ತಿದ್ದಾರೆ.ಒಂದೇ ಪರೀಕ್ಷಾ ಕೇಂದ್ರದ ಹಲವು ಅಭ್ಯರ್ಥಿಗಳು, ಒಂದೇ ಕುಟುಂಬದ ಕೆಲವರು ಆಯ್ಕೆ ಆಗಿರುವ ಬಗ್ಗೆ ಗಂಭೀರ ಆರೋಪ ಮಾಡಲಾಗಿದ್ದು, ಸಿಇಐ ತನಿಖೆಗೆ ಒತ್ತಾಯಿಸಿದ್ದಾರೆ.
2023-24ನೇ ಸಾಲಿನಲ್ಲಿ 384 ಗ್ರೂಪ್ ಎ ಮತ್ತು ಬಿ ಹುದ್ದೆಗಳ ನೇಮಕಕ್ಕೆ ಕೆಪಿಎಸ್‌ಸಿ ಫೆ.26ರಂದು ಅಧಿಸೂಚನೆ ಹೊರಡಿಸಿತ್ತು. ಮೊದಲಿಗೆ ಆಗಸ್ಟ್ 2024ರಲ್ಲಿ ನಡೆದ ಪ್ರಾಥಮಿಕ ಪರೀಕ್ಷೆಯ ಪ್ರಶ್ನೆಪತ್ರಿಕೆಯ ಅನುವಾದದಲ್ಲಿ ಪ್ರಮಾದ ಉಂಟಾಗಿ ಸರ್ಕಾರ ಪೂರ್ವಭಾವಿ ಪರೀಕ್ಷೆ ರದ್ದುಗೊಳಿಸಿ 2024ರ ಡಿ.29ಕ್ಕೆ ಮರು ಪರೀಕ್ಷೆ ನಡೆಸಿತ್ತು. ಆ ಪರೀಕ್ಷೆಯಲ್ಲೂ ಅನುವಾದದಲ್ಲಿ ಎಡವಟ್ಟುಗಳಾಗಿದ್ದವು.

ಬಳಿಕ 2025ರ ಮೇ 3, 5, 7 ಮತ್ತು 9ರಂದು ಮುಖ್ಯ ಪರೀಕ್ಷೆಗಳು ನಡೆದಿದ್ದವು. ಈಗ ಆಯೋಗ ಮುಖ್ಯ ಪರೀಕ್ಷಾ ಫಲಿತಾಂಶ ಪ್ರಕಟಿಸಿ 1:3 ಅನುಪಾತದಲ್ಲಿ ಅಭ್ಯರ್ಥಿಗಳನ್ನು ವ್ಯಕ್ತಿತ್ವ ಪರೀಕ್ಷೆಗೆ ಆಯ್ಕೆ ಮಾಡಿದೆ. ಸದ್ಯ ಈ ಆಯ್ಕೆ ಪಟ್ಟಿ ಸಾಕಷ್ಟು ಗೊಂದಲ ಉಂಟುಮಾಡಿದೆ. ಕರ್ನಾಟಕ ಲೋಕ ಸೇವಾ ಆಯೋಗದ ವಿರುದ್ಧ ವಿದ್ಯಾರ್ಥಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಮಕ್ಕಳಿಗೆ ಸೀಟ್ ಕೊಡಿಸಲು ಕುತಂತ್ರ:**
ಈ ಬಗ್ಗೆ ಅಖಿಲ ಭಾರತ ವಿದ್ಯಾರ್ಥಿ ಸಂಘದ ಅಧ್ಯಕ್ಷ ಕಾಂತಕುಮಾರ ಅವರು ಮಾತನಾಡಿದ್ದು, ಒಂದೇ ಕೊಠಡಿಯಲ್ಲಿ ಪರೀಕ್ಷೆ ಬರೆದ 15 ಮಂದಿ ಆಯ್ಕೆ ಆಗಿದ್ದಾರೆ. ಸೀರಿಯಲ್ ನಂಬರ್ ಸಾಲಾಗಿ ಆಯ್ಕೆ ಹೇಗೆ ಎಂದು ಪ್ರಶ್ನೆ ಮಾಡಿದ್ದಾರೆ.ಇನ್ನು ಒಂದೇ ಕುಟುಂಬದ ಇಬ್ಬರು-ಮೂವರು ಆಯ್ಕೆ ಆಗಿದ್ದಾರೆ. ಪ್ರಾಮಾಣಿಕವಾಗಿ ಓದಿದವರಿಗೆ ಕೆಲಸ ಸಿಗಬೇಕು. ಹೀಗಾಗಿ ಕಮಿಟಿ ರಚನೆ ಮಾಡಿ ತನಿಖೆ. ಸರ್ಕಾರದ ಕೈಲಿ ಆಗಲಿಲ್ಲ ಅಂದರೆ ಸಿಬಿಐಗೆ ವಹಿಸಿ. ಯಾವುದೇ ಕಾರಣಕ್ಕೂ ಕೆಪಿಎಸ್‌ಸಿಗೆ ನೋಟಿಫಿಕೇಶನ್ ಕೊಡಬಾರದು. ಪ್ರಭಾವಿಗಳ ಮಕ್ಕಳಿಗೆ ಸೀಟ್ ಕೊಡಿಸಲು ಕುತಂತ್ರ ನಡೆದಿದೆ ಎಂದು ಅವರು ಗಂಭೀರ ಆರೋಪ ಮಾಡಿದ್ದಾರೆ.

ಇನ್ನು ಕರ್ನಾಟಕ ಲೋಕಸೇವಾ ಆಯೋಗದಿಂದ ಅಕ್ರಮ ಆರೋಪ ಹಿನ್ನೆಲೆ ಕೆಪಿಎಸ್‌ಸಿ ನೇಮಕಾತಿಯಲ್ಲಿ ಮಧ್ಯಪ್ರವೇಶಿಸಲು ಪ್ರಧಾನಿ ನರೇಂದ್ರ ಮೋದಿಗೆ ಅಭ್ಯರ್ಥಿಗಳು ಮನವಿ ಮಾಡಿದ್ದಾರೆ. ಈ ಬಗ್ಗೆ ಎಕ್ಸ್ ಖಾತೆಯಲ್ಲಿ ಕೆಎಎಸ್ ಫಲಿತಾಂಶದ ಪ್ರತಿ ಟ್ಯಾಗ್ ಮಾಡಿದ್ದು, ನಾವು ಉತ್ತಮವಾಗಿ ಪರೀಕ್ಷೆ ಬರೆದಿದರೂ ಆಯ್ಕೆಯಾಗಿಲ್ಲವೆಂದು ದೂರು ನೀಡಿದ್ದಾರೆ.

# ಬೇಸಿಗೆಯ ಉಷ್ಣತೆ ಏರಿಕೆ ಹಿನ್ನೆಲೆ: ಆರೋಗ್ಯ ಇಲಾಖೆಯಿಂದ ಸಾರ್ವಜನಿಕರಿಗೆ ಸಲಹೆಗಳು

ಸಕ್ಕರೆ ಅಂಶವುಳ್ಳ ಪಾನೀಯ ಅತಿಯಾಗಿ ಸೇವಿಸಬಾರದು. ಬಿಸಿಯಾದ ಮಸಾಲೆಯುಕ್ತ ಆಹಾರ ತಿನ್ನಬಾರದು. ಮಾಂಸಹಾರ ಸೇವನೆ ಮತ್ತು ಮದ್ಯಪಾನ ವರ್ಜಿಸಬೇಕು. ಬಿಗಿಯಾದ ಗಾಳಿಯಾಡದ ಪಾದರಕ್ಷೆ ಅಥವಾ ಶೂ ಧರಿಸಬೇಡಿ. ಉಷ್ಣತೆಯಿಂದ ಸುಸ್ತಾದಾಗ ತುಂಬಾ ತಣ್ಣಗಿನ ಅಥವಾ ಶೀತಲೀಕರಿಸಿದ ನೀರಿನಿಂದ ಒರೆಸಿಕೊಳ್ಳಬೇಡಿ (ಇದರಿಂದ ದೇಹದ ಹೊರ ಪದರದಲ್ಲಿನ ರಕ್ತನಾಳಗಳು ಸಂಕುಚಿತಗೊಂಡು ದೇಹದ ಒಳಗಿನ ಉಷ್ಣತೆ ದೇಹದೊಳಗೆ ಬಂಧಿತವಾಗಿ ಅಂಗಾಂಗಗಳು ನಿಷ್ಕ್ರಿಯಗೊಂಡು ಹೆಚ್ಚಿನ ಹಾನಿಯಾಗುವ ಸಂಭವವಿರುತ್ತದೆ). ಬೇಸಿಗೆಯಲ್ಲಿ ಕಲುಷಿತ ನೀರಿನ ಸೇವನೆಯಿಂದ ಸಂಭಾವ್ಯ ವಾಂತಿ-ಬೇಧಿ ಪ್ರಕರಣಗಳು ಉಂಟಾಗುವ ಹಿನ್ನಲೆಯಲ್ಲಿ ಶುದ್ದೀಕರಿಸದೇ ಇರುವ ನೀರನ್ನು ಮತ್ತು ಕೆರೆ, ಕುಂಟೆಗಳ ನೀರನ್ನು ನೇರವಾಗಿ ಕುಡಿಯಬಾರದು. ಕೈಗಳನ್ನು ತೊಳೆದುಕೊಳ್ಳದೇ ಆಹಾರವನ್ನು ಸೇವಿಸಬೇಡಿ, ನೀರಿನ ಸಂಗ್ರಹಣಗಳ ಮೇಲೆ ತಪ್ಪದೇ ಮುಚ್ಚಳ ಮುಚ್ಚಬೇಕು. ಬಯಲು ಪ್ರದೇಶಗಳಲ್ಲಿ ಮಲ, ಮೂತ್ರ ವಿಸರ್ಜನೆ ಮಾಡಬಾರದು. ರಸ್ತೆ ಬದಿ ತೆರೆದಿಟ್ಟ ಆಹಾರ ಪದಾರ್ಥ ಮತ್ತು ಕತ್ತಿರಿಸಿಟ್ಟ ಹಣ್ಣುಗಳನ್ನು ತಿನ್ನಬಾರದು. ತಯಾರಿಸಿದ ಆಹಾರವನ್ನು ಮುಚ್ಚಳದಿಂದ ಮುಚ್ಚಬೇಕು.

**ಶಾಖಾಘಾತದ ಲಕ್ಷಣಗಳು:** ಅತಿಹೆಚ್ಚು ಬಿಸಿಲಿನ ತಾಪಮಾನದಿಂದ ಶಾಖಾಘಾತಕ್ಕೆ ಒಳಗಾಗುವ ಸಂಭವವಿರುತ್ತದೆ. ಅದರಲ್ಲಿ ಮುಖ್ಯವಾಗಿ ಸಂಭ್ರಾಂತಿ, ಸ್ಪಷ್ಟವಿಲ್ಲದ ಮಾತು, ಅರೆಪ್ರಜ್ಞೆ ಶಾಖಾಘಾತದ ಲಕ್ಷಣಗಳಾಗಿವೆ.

**ಶಾಖಾಘಾತಕ್ಕೆ ಚಿಕಿತ್ಸೆ:** ಮನುಷ್ಯನು ಬಿಸಿಲಿನ ಬೇಗೆಯಿಂದ ಶಾಖಾಘಾತಕ್ಕೊಳಗದಾಗ ನೆರಳಿರುವೆಡೆಗೆ ಸ್ಥಳಾಂತರಿಸಬೇಕು. ವ್ಯಕ್ತಿಯ ವಸ್ತ್ರಗಳನ್ನು ಸಡಿಲಗೊಳಿಸಿ ಅಂಗಾತ ಮಲಗಿಸಿಬೇಕು. ಕಾಲುಗಳನ್ನು ಎತ್ತರಿಸಿ, ಸಾಮಾನ್ಯ ನೀರಿನಿಂದ ದೇಹವನ್ನು ಒರೆಸಬೇಕು. ಅತಿ ಅಗತ್ಯವೆನಿಸಿದರೆ ಹತ್ತಿರದ ವೈದ್ಯರ ಬಳಿ ತಕ್ಷಣವೇ ಕರೆದುಕೊಂಡು ಹೊಗಬೇಕು. ಯಾವುದೇ ತುರ್ತು ವಾಹನಕ್ಕಾಗಿ (ಅಂಬ್ಯುಲೆನ್ಸ್) 108ಕ್ಕೆ ಕರೆ ಮಾಡಿ ಸದಯಪಯೋಗ ಪಡೆಯಬೇಕು. ಈಗಾಗಲೇ ಹವಮಾನ ಬದಲಾವಣೆ ಮತ್ತು ಮಾನವ ಆರೋಗ್ಯ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳ ನೇತೃತ್ವದಲ್ಲಿ ಜಿಲ್ಲೆಯಲ್ಲಿ ಆರೋಗ್ಯ ಇಲಾಖೆಯ ಸಿಬ್ಬಂದಿಗೆ ಹಾಗೂ ಆಶಾ ಕಾರ್ಯಕರ್ತೆಯರಿಗೆ ತರಬೇತಿ ನೀಡಿ ಜನತೆಗೆ ಜಾಗೃತಿ ನೀಡಲು ಕ್ರಮವಹಿಸಲಾಗುತ್ತಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

# ನಶಾ ಮುಕ್ತ ಭಾರತ ಅಭಿಯಾನದ ಬೃಹತ್ ವಾಕಥಾನ್‌ಗೆ ಸಚಿವರಿಂದ ಚಾಲನೆ

ಧೈರ್ಯದ ದಾರಿ

**ರಾಯಚೂರು ಮಾ,04-:** ರಾಯಚುರು ಜಿಲ್ಲಾ ವ್ಯಾಪ್ತಿಯ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಕರ್ನಾಟಕಕ್ಕೆ ಸಂಯೋಜನೆ ಗೊಳಪಟ್ಟಿರುವ ಕಾಳೇಜುಗಳ ಸಂಘ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಕರ್ನಾಟಕ ದಿಶಾಭೋದ್ ಪೌಂಢೇಶನ್ ಮತ್ತು ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ ಇವರ ಸಹಯೋಗದೊಂದಿಗೆ ಸ್ವಾಸ್ಥ ಭಾರತ, ಶ್ರೇಷ್ಠ ಭಾರತ, ಯುವ ಶುದ್ಧಿ ಅಭಿಯಾನ ಅಂಗವಾಗಿ ನಶಾ ಮುಕ್ತ ಭಾರತ, ನಶಾ ಮುಕ್ತ ಕರ್ನಾಟಕ, ನಶಾ ಮುಕ್ತ ಕ್ಯಾಂಪಸ್, ಅಂಗಾಂಗ ದಾನ ಅಭಿಯಾನ ಮತ್ತು ವಾಕಥಾನ್‌ಗೆ ಮಾರ್ಚ್ 6ರ ಬೆಳಿಗ್ಗೆ 7.30ಕ್ಕೆ ನಗರದ ಜಿಲ್ಲಾ ಪೊಲೀಸ್ ಮೈದಾನದಲ್ಲಿ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋ ಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಚಾಲನೆ ನೀಡುವರು.

ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಪೀಠಾಧಿಪತಿಗಳಾದ ಪರಮಪೂಜ್ಯ 108 ಶ್ರೀ ಸುಬುಧೇಂದ್ರ ತೀರ್ಥರು ಕಾರ್ಯಕ್ರಮದ ಸಾನ್ನಿಧ್ಯ ವಹಿಸುವರು. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸ 'ರಾಜು ಅವರು ಧ್ವಜಾರೋಹಣ ನೆರವೇರಿಸುವರು.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಬಿ.ಸಿ. ಭಗವಾನ್ ಅವರು ಪ್ರತಿಜ್ಞಾವಿಧಿ ಬೋಧನೆ ಮತ್ತು ದಿಕ್ಸೂಚಿ ಭಾಷಣ ನೀಡಲಿದ್ದಾರೆ. ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬ ಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಹಾಗೂ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಭಾರತ ಸರ್ಕಾರದ ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ ನಿರೀಕ್ಷಕರಾದ ವಿಕಾಸ್ ಸಿಂಗ್, ದಿಶಾಭೋದ್ ಪೌಂಡೇಶನ್ ಡಾ.ಹರ್ಷ ಹರ್ದಾರ್, ಎಸ್.ಪಿ.ಚಿದಾನಂದ್ ಸೇರಿದಂತೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿಕಾರಿಗಳು, ಸಿಬ್ಬಂದಿಗಳ ವರ್ಗ, ಸೆನೆಟ್, ಸಿಂಡಿಕೇಟ್, ಅಕೆಡೆಮಿಕಲ್ ಕೌನ್ಸಿಲ್ ಸದಸ್ಯರು ಹಾಗೂ ರಾಯಚೂರು ಜಿಲ್ಲಾ ವ್ಯಾಪ್ತಿಯ ವಿಶ್ವವಿದ್ಯಾಲಯದ ಸಂಯೋಜನೆಗೊಳಪಟ್ಟಿರುವ ಕಾಲೇಜುಗಳ ಆಡಳಿತ ಮಂಡಳಿ, ಅಧ್ಯಕ್ಷರು, ಪ್ರಾಂಶುಪಾಲರು ಮತ್ತು ಸಿಬ್ಬಂದಿಗಳು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ಪಟ್ಟಣದಲ್ಲಿ ಸಂಭ್ರಮದ ಹೋಲಿ ಹಬ್ಬ ಆಚರಣೆ



ಧೈರ್ಯದ ದಾರಿ

**ಮಾನ್ವಿ: ಪಟ್ಟಣದಲ್ಲಿ ಹೋಲಿ ಹಬ್ಬವನ್ನು ಯುವಕರು ಹಾಗೂ ಮಕ್ಕಳು ಪರಸ್ಪರ ಬಣ್ಣವನ್ನು ಹಾಕುವ ಮೂಲಕ ಸಂಭ್ರಮದಿಂದ ಆಚರಿಸಿದರು.**

**ವಿಶೇಷವಾಗಿ ರಾಜಸ್ಥಾನಿ ಸಮಾಜದವರು ಪಟ್ಟಣದಲ್ಲಿ ತಮ್ಮ ಸಮುದಾಯದವರೊಂದಿಗೆ ಹೋಲಿ ಆಚಾರಿಸಿದರು.ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಹೋಳಿ ಹಬ್ಬದ ಸಂಭ್ರಮದಲ್ಲಿ ಭಾಗವಹಿಸಿ ಸಾರ್ವಜನಿಕರಿಗೆ ಕಾರ್ಯಕರ್ತರಿಗೆ ಬಣ್ಣವನ್ನು ಹಚ್ಚುವ ಮೂಲಕ ಹೋಲಿ ಹಬ್ಬದ ಶುಭಾಶಯವನ್ನು ಕೋರಿದರು.ಜೆಡಿಎಸ್ ಪಕ್ಷದ ರಾಜ್ಯ ಯುವ ಘಟಕದ ಉಪಾಧ್ಯಕ್ಷರಾದ ರಾಜಾ ರಾಮಚಂದ್ರ ನಾಯಕ , ನಗರ ಘಟಕದ ಅಧ್ಯಕ್ಷ ಹೆಚ್. ಮೌನೇಶ್ ಗೌಡ, ಜಸ್ವಂತ್ ಶೇಟ್ ಸೇರಿದಂತೆ ನೂರಾರು ಯುವಕರು ಭಾಗವಹಿಸಿದರು**

# ಮನೆ ಪಟ್ಟಿ ಹಾಗೂ ಜನಗಣತಿಗೆ ಸಂಬಂಧಿಸಿದ ಕಾರ್ಯಗಳಿಂದ ಹಿರಿಯ ನೌಕರರಿಗೆ ವಿನಾಯಿತಿ ನೀಡಿ



ಧೈರ್ಯದ ದಾರಿ

**ಮಾನ್ವಿ:** ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ತಾಲೂಕು ಘಟಕದ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಗ್ರೇಡ್ -2 ತಹಶೀಲ್ದಾರ್ ಅಬ್ದುಲ್ ವಾಹಿದ್ ರವರಿಗೆ ಮನವಿ ಸಲ್ಲಿಸಿ ತಾ.ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಸುರೇಶ ಕುರ್ಡಿ ಮಾತನಾಡಿ ಸರ್ಕಾರವು ಏ.26ರಿಂದ ಹಮ್ಮಿಕೊಂಡಿರುವ ಮನೆ ಪಟ್ಟಿ ಹಾಗೂ ಜನಗಣತಿಗೆ ಸಂಬಂಧಿಸಿದಂತೆ ತಾಲೂಕು ಆಡಳಿತದಿಂದ ತಾಲೂಕಿನಲ್ಲಿ ವಿವಿಧ ಇಲಾಖೆಗಳಲ್ಲಿ ಸೇವೆಸಲ್ಲಿಸುತ್ತಿರುವ ವಿಕಲಚೇತನ ನೌಕರರು, ಗಂಭಿರ ಕಾಯಿಲೆಗಳಿಂದ ಬಳಲುತ್ತಿರುವವರು, ಗರ್ಭಿಣಿಯರು, ಹೆರಿಗೆ ರಜೆಯಲ್ಲಿರುವವರು, 2 ವರ್ಷ ಒಳಗಿನ ಮಗುವಿಗೆ ಹಾಲುಣಿಸುವ ಮಹಿಳಾ ನೌಕರರು, ಎಸ್.ಐ.ಆರ್ ಕರ್ತವ್ಯ ನಿರ್ವಹಿಸುತ್ತಿರುವ ಬಿ.ಎಲ್.ಓ. ನೌಕರರು, 55 ವರ್ಷ ಮೇಲ್ಪಟ್ಟ ಹಾಗೂ ಏಪ್ರೀಲ್ ,ಮೇ ತಿಂಗಳಲ್ಲಿ ನಿವೃತ್ತಿ ಹೊಂದುತ್ತಿರುವ ನೌಕರರಿಗೆ ಹಾಗೂ ಶಿಕ್ಷಕರನ್ನು ಮನೆ ಪಟ್ಟಿ ಹಾಗೂ ಜನಗಣತಿಗೆ ಸಂಬಂಧಿಸಿದ ಕಾರ್ಯಗಳಿಂದ ವಿನಾಯಿತಿ ನೀಡಬೇಕು ಎಂದು ಕೋರಿದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ತಾಲೂಕು ಘಟಕದ ಕಾರ್ಯದರ್ಶಿ ಹಂಪಣ್ಣ ಚಂಡೂರು, ಜಿ.ಪಿ.ಟಿ.ಶಿಕ್ಷಕರ ಸಂಘದ ತಾ.ಅಧ್ಯಕ್ಷ ಶ್ರೀಕಾಂತ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ತಿಮ್ಮೇಶನಾಯಕ, ಜಿಲ್ಲಾ ಉಪಾಧ್ಯಕ್ಷರಾದ ಸಿ.ಎಂ.ನರಸಿಂಹ, ತಾ. ಸಂಘಟನ ಕಾರ್ಯದರ್ಶಿ ಸೂಗುರೇಶ ಪಾಟೀಲ್, ಮಲ್ಲಿಕಾರ್ಜುನ,ವಿರುಪಣ್ಣ, ಸೇರಿದಂತೆ ವಿವಿಧ ಇಲಾಖೆಯ ನೌಕರರು ಇದ್ದರು.

# ಮಾ.10ರಿಂದ ವಿಶೇಷ ಬಸ್ಸುಗಳ ಕಾರ್ಯಾಚರಣೆ

**ರಾಯಚೂರು ಮಾ,04-** ಮಾರ್ಚ 16ರಿಂದ ಮಾರ್ಚ 20ರವರೆಗೆ ಯುಗಾದಿ ಹಬ್ಬದ ಪ್ರಯುಕ್ತ ಶ್ರೀಶೈಲಂ ಶ್ರೀಮಲ್ಲಿಕಾರ್ಜುನ ಜಾತ್ರೆಗೆ ರಾಯಚೂರು ವಿಭಾಗದ ವ್ಯಾಪ್ತಿಯಲ್ಲಿ ಬರುವ ರಾಯಚೂರು, ಲಿಂಗಸೂಗುರು, ಸಿಂಧನೂರು, ಮಾನವಿ, ದೇವದುರ್ಗ, ಮಸ್ಕಿ ಘಟಕಗಳಿಂದ 280 ವಿಶೇಷ ಬಸ್ಸುಗಳ ಕಾರ್ಯಾಚರಣೆಯನ್ನು ಆರಂಭಿಸಲಾಗಿದೆ.

ಮಾರ್ಚ್ 16 ರಿಂದ 20ರವರೆಗೆ ಶ್ರೀಶೈಲಂ ಜಾತ್ರೆ ನಡೆಯುತ್ತಿದೆ. ಅಲ್ಲದೆ ಮಾರ್ಚ್ 19 ರಂದು ಶ್ರೀ ಮಲ್ಲಿಕಾರ್ಜುನ ಸ್ವಾಮಿಯ ರಥೋತ್ಸವ ಜರುಗಲಿದೆ.

ರಾಯಚೂರು-ಕರ್ನೂಲ್-ಶ್ರೀಶೈಲ್, ಸಿಂಧನೂರು-ಆದೋನಿ-ಶ್ರೀಶೈಲ್, ಸಿಂಧನೂರು-ರಾಯಚೂರು-ಕರ್ನೂಲ್-ಶ್ರೀಶೈಲ್, ಲಿಂಗಸುಗೂರು-ಮಸ್ಕಿ-ಸಿಂಧನೂರು-ಆದೋನಿ-ಶ್ರೀಶೈಲ್, ಮಾನವಿ-ಸಿಂಧನೂರು-ಕರ್ನೂಲ್-ಶ್ರೀಶೈಲ್, ಮಾನವಿ-ಸಿಂಧನೂರು-ಆದೋನಿ-ಶ್ರೀಶೈಲ್, ಮಸ್ಕಿ-ರಾಯಚೂರು-ಕರ್ನೂಲ್-ಶ್ರೀಶೈಲ್, ಮಸ್ಕಿ-ಸಿಂಧನೂರು-ಆದೋನಿ-ಶ್ರೀಶೈಲ್, ದೇವದುರ್ಗ-ರಾಯಚೂರು-ಕರ್ನೂಲ್-ಶ್ರೀಶೈಲ್ ಮಾರ್ಗವಾಗಿ ಬಸ್‌ಗಳು ಸಂಚಾರ ಮಾಡಲಿವೆ.

50 ಪ್ರಯಾಣಿಕರು ಲಭ್ಯವಿದ್ದಲ್ಲಿ ಅವರ ಸ್ವ-ಸ್ಥಳದಿಂದ ನೇರವಾಗಿ ಶ್ರೀಶೈಲಂಗೆ ಬಸ್ಸು ವ್ಯವಸ್ಥೆಯನ್ನು ಒದಗಿಸಲಾಗುವುದು. ಹಾಗೂ ಪ್ರಯಾಣಿಕರು ಮಹಾನಂದಿಗೆ ಹೋಗುವುದಕ್ಕೆ ಇಷ್ಟಪಟ್ಟಲ್ಲಿ ನಿಗದಿತ ಟಿಕೇಟ್ ದರದಂತೆ ಬಸ್ ಸೌಲಭ್ಯ ಒದಗಿಸಲಾಗುತ್ತಿದ್ದು, ಶ್ರೀ ಶ್ರೀಶೈಲಂ ಹೋಗಿ ಬರುವ ಪ್ರಯಾಣಿಕರು, ಈ ವಿಶೇಶ ಬಸ್ಸುಗಳ ಸೌಕರ್ಯವನ್ನು ಪಡೆದುಕೊಳ್ಳುವಂತೆ ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ರಾಯಚೂರು-1ನೇ ಘಟಕ ಮೊಬೈಲ್ ಸಂಖ್ಯೆ: 7760992363, ರಾಯಚೂರು-2ನೇ ಘಟಕ ಮೊಬೈಲ್ ಸಂಖ್ಯೆ: 7760992364, ರಾಯಚೂರು-3ನೇ ಘಟಕ ಮೊಬೈಲ್ ಸಂಖ್ಯೆ: 7619351087, ಲಿಂಗಸುಗೂರು ಘಟಕ ಮೊಬೈಲ್ ಸಂಖ್ಯೆ: 7760992365, ಸಿಂಧನೂರು ಘಟಕ ಮೊಬೈಲ್ ಸಂಖ್ಯೆ: 7760992366, ಮಾನವಿ ಘಟಕ ಮೊಬೈಲ್ ಸಂಖ್ಯೆ: 7760992367, ದೇವದುರ್ಗ ಘಟಕ ಮೊಬೈಲ್ ಸಂಖ್ಯೆ: 7760992368, ಮಸ್ಕಿ ಘಟಕ ಮೊಬೈಲ್ ಸಂಖ್ಯೆ: 7760992361, ಕೇಂದ್ರ ಬಸ್ ನಿಲ್ದಾಣ ರಾಯಚೂರು ಮೊಬೈಲ್ ಸಂಖ್ಯೆ: 7760992370 ಅಥವಾ ವಿಭಾಗೀಯ ಸಂಚಾರ ಅಧಿಕಾರಿ ಮೊಬೈಲ್ ಸಂಖ್ಯೆ: 7760992352ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿಗಳಾದ ಚಂದ್ರಶೇಖರ್ ಎಂ.ಎಸ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ನಾಟಕ ಮಾಧ್ಯಮ ಅಕಾಡೆಮಿಯ ತರಬೇತಿಗೆ ಪತ್ರಕರ್ತೆಯರಿಂದ ಅರ್ಜಿ ಆಹ್ವಾನ

**ರಾಯಚೂರು ಮಾ,04-** ಕರ್ನಾಟಕ ಮಾಧ್ಯಮ ಅಕಾಡೆಮಿಯು ಇನ್ಫೋಸಿಸ್ ಸ್ಪ್ರಿಂಗ್‌ಬೋರ್ಡ್ ಸಿ.ಎಸ್.ಆರ್. ಕಾರ್ಯಕ್ರಮದಡಿ ಮಹಿಳಾ ಪತ್ರಕರ್ತೆಯರಿಗಾಗಿಯೇ ವಿಶೇಷವಾಗಿ ತರಬೇತಿ ಆಯೋಜಿಸಿದ್ದು, ಪತ್ರಕರ್ತೆಯರಿಂದ ಅರ್ಜಿ ಆಹ್ವಾನಿಸಿದೆ.

ತರಬೇತಿಯು ಮಾರ್ಚ್ 25 ರಿಂದ 27ರ ವರೆಗೆ ಮೈಸೂರಿನ ಇನ್‌ಫೋಸಿಸ್ ಕ್ಯಾಂಪಸ್‌ನಲ್ಲಿ ನಡೆಯಲಿದೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕನಿಷ್ಠ 5 ವರ್ಷ ಸೇವಾನುಭವ ಹೊಂದಿರುವ ಪತ್ರಕರ್ತೆಯರು ಅರ್ಜಿ ಸಲ್ಲಿಸಬಹುದು.

ಆಸಕ್ತ ಪತ್ರಕರ್ತೆಯರು ಗೂಗಲ್ ಫಾರ್ಮ್ https://forms.gle/tozr4GxUQibDHBvk9 ನಲ್ಲಿ ಮಾಹಿತಿ ಹಾಗೂ ದಾಖಲೆಗಳನ್ನು ಒದಗಿಸುವ ಮೂಲಕ ತರಬೇತಿಗೆ ನೋಂದಾಯಿಸಬಹುದಾಗಿದೆ.

ಅರ್ಜಿ ನಮೂನೆಯಲ್ಲಿ ಸೂಚಿಸಿರುವಂತೆ ಪತ್ರಕರ್ತೆಯರು ಭಾವಚಿತ್ರ, ವಯಸ್ಸಿನ ದಾಖಲೆ, ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಯ ಮುಖ್ಯಸ್ಥರ ದೃಢೀಕರಣ ಅಥವಾ ಕಚೇರಿಯ ಅಧಿಕೃತ ಗುರುತಿನಚೀಟಿ, ಸದರಿ ಮಾಧ್ಯಮ ಸಂಸ್ಥೆಯು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿ ಸೇರ್ಪಡೆಯಾಗಿರುವ ಕುರಿತ ದಾಖಲೆ ಹಾಗೂ ಕನಿಷ್ಠ 5 ವರ್ಷ ಸೇವೆ ಸಲ್ಲಿಸಿರುವ ಕುರಿತು ಸೇವಾನುಭವ ದಾಖಲೆಗಳನ್ನು ಸಲ್ಲಿಸಬೇಕು.

ಇದು ಮೂರು ದಿನಗಳ ವಸತಿಯುತ ತರಬೇತಿಯಾಗಿದ್ದು, ಪತ್ರಕರ್ತೆಯರಿಗೆ ನಿಯಮಾನುಸಾರ ಪ್ರಯಾಣ ಭತ್ಯೆ ನೀಡಲಾಗುವುದು. ಈ ತರಬೇತಿ ಕಾರ್ಯಕ್ರಮದಲ್ಲಿ ಡಿಜಿಟಲ್ ಮಾಧ್ಯಮ, ಎಐ ಬಳಕೆ ಹಾಗೂ ಸಾಫ್ಟ್ ಸ್ಕಿಲ್ ಅಭಿವೃದ್ಧಿ ಮತ್ತು ನಾಯಕತ್ವ ತರಬೇತಿ ನೀಡಲಾಗುವುದು.ಪತ್ರಕರ್ತೆಯರ ಆಯ್ಕೆ ಕುರಿತ ಅಂತಿಮ ನಿರ್ಧಾರ ಅಕಾಡೆಮಿಯದ್ದೇ ಆಗಿರುತ್ತದೆ. ಆಸಕ್ತರು ಅರ್ಜಿಯನ್ನು ಸಲ್ಲಿಸಲು ಮಾರ್ಚ್ 10 ಕೊನೆಯ ದಿನವಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಶಿಕ್ಷಕನ ಗೌರವ: ಸರಕಾರದ ಜವಾಬ್ದಾರಿ

# ಶಿಕ್ಷಕ ನಿನ್ನ ತಾಳ್ಮೆಗೆ ಒಂದು ಸಲಾಂ

ಒಂದು ಕಾಲದಲ್ಲಿ ಶಿಕ್ಷಕನಿಗೆ ಎಲ್ಲರೂ ಗೌರವವನ್ನು ಕೊಡುತ್ತಿದ್ದರು ಅವನಿಗೆ ಸಮಯದಲ್ಲಿ ಉನ್ನತ ಸ್ಥಾನವಿತ್ತು. ಸಮಾಜದಲ್ಲಿ ಅವನಿಗೆ ಗೌರವ ಇತರರು ಅವನನ್ನು ಬುದ್ಧಿವಂತನು ಏನಾದರೂ ಸಮಸ್ಯೆಗಳಾದಲ್ಲಿ ಪರಿಹಾರವನ್ನು ಕೊಡಬಲ್ಲವನು ಎಂದು ಒಂದು ಕಾಲದಲ್ಲಿ ನೋಡಬಹುದಾಗಿತ್ತು ಆಗಿನ ಕಾಲದಲ್ಲಿ ಶಿಕ್ಷಕನಿಗೆ ತರಗತಿಗಳನ್ನು ತೆಗೆದುಕೊಳ್ಳುವಂತದ್ದು ವಿದ್ಯಾರ್ಥಿಗಳ ಭವಿಷ್ಯವನ್ನು ರೂಪಿಸುವಂಥದ್ದು ಶಾಲೆಯ ಗೌರವವನ್ನು ಹೆಚ್ಚಿಸುವಂತಹ ಹಾಗೂ ಶಾಲೆಯ ಅಭಿವೃದ್ಧಿಯ ಕೆಲಸಗಳನ್ನು ಶಾಲೆಗೆ ಬೇಕಾಗಿರುವ ಮೂಲ ಸೌಲಭ್ಯಗಳನ್ನು ಪಡೆಯುವಲ್ಲಿ ದೊರಕಿಸಿಕೊಳ್ಳುವಲ್ಲಿ ಗ್ರಾಮೀಣ ಭಾಗದಲ್ಲಿ ಆದರೆ ವಿದ್ಯಾರ್ಥಿಗಳ ತೊಂದರೆಯನ್ನು ಅರಿತು ಆ ಊರಿನ ಜನರೆಲ್ಲ ಸೇರಿ ಗ್ರಾಮದ ಹಿರಿಯರನ್ನಾಗಿ ರಾಜಕೀಯ ನಾಯಕರನ್ನಾಗಲಿ ಭೇಟಿ ಮಾಡಿ ಶಿಕ್ಷಕನ ಶ್ರಮವನ್ನ ಕಡಿಮೆಗೊಳಿಸುತ್ತಿದ್ದರು

ಅವರ ಜವಾಬ್ದಾರಿ ಕೇವಲ ನಮ್ಮ ಮಕ್ಕಳಿಗೆ ವಿದ್ಯಾಭ್ಯಾಸವನ್ನು ನೀಡಿ ಅವರಿಗೆ ಸೂಕ್ತ ಮಾರ್ಗದರ್ಶನ ನೀಡಲಿ ಎಂಬ ಆಲೋಚನೆಯಲ್ಲಿದ್ದರೂ ದಿನ ಕಳೆದಂತೆ ಶಿಕ್ಷಕ ಮತ್ತು ಶಿಕ್ಷಕ ವೃತ್ತಿಯಲ್ಲಿ ಅನೇಕ ಬದಲಾವಣೆ ಆಗಿದ್ದವೆ ಅದು ಎಂತಹ ಬದಲಾವಣೆ ಎಂದರೆ ಅಷ್ಟೇನೂ ವಿಶೇಷವಿಲ್ಲ ಅನಿಸುತ್ತದೆ ಆದರೆ ಶಿಕ್ಷಣ ಪ್ರೇಮಿಗಳು ಶಿಕ್ಷಕ ವೃತ್ತಿ ಭಾಂದವರು ಇದನ್ನು ಸೂಕ್ಷ್ಮವಾಗಿ ಗಮನಿಸಿದಾಗ ಅದು ಅನುಭವಕ್ಕೆ ಬರುತ್ತದೆ ಹೌದು ಶಿಕ್ಷಕ ವೃತ್ತಿ ಪವಿತ್ರವಾದದ್ದು ಸರ್ಕಾರಿ ನೌಕರಿ ಸೇರುವಂತ ಸಮಯದಲ್ಲಿ ಸರ್ಕಾರ ಹೇಳುವ ಎಲ್ಲಾ ನಿಯಮಗಳನ್ನು ಪಾಲಿಸುತ್ತೇನೆ ಎಲ್ಲಾ ಕಾರ್ಯಗಳನ್ನು ಮಾಡುವಲ್ಲಿ ಸಹಕಾರವನ್ನು ನೀಡುತ್ತೇನೆ ಎಂದು ಪ್ರಮಾಣ ಮಾಡಿರುತ್ತೇವೆ ಆ ಪ್ರಮಾಣದಲ್ಲಿ ವಿದ್ಯಾರ್ಥಿಗಳ ಭವಿಷ್ಯಕ್ಕಾಗಿ ಶಾಲೆಯ ಬೆಳವಣಿಗೆಗಾಗಿ ಕಾರ್ಯನಿರ್ವಹಿಸುತ್ತೇನೆ ಎಂಬುವ ಅಂಶವು ಪ್ರಮುಖವಾಗಿರುತ್ತದೆ ಆದರೆ ಕ್ರಮೇಣ ಸರ್ಕಾರವು ಶಿಕ್ಷಕರನ್ನ ವಿದ್ಯಾಭ್ಯಾಸ ಮಾಡಿಸಲು ಅವಕಾಶವನ್ನು ನೀಡದೆ ಜನಗಣತಿ ಜಾತಿ ಗಣತಿ ಎಂಬ ವಿವಿಧ ಕೆಲಸ ಕಾರ್ಯಗಳಿಗೆ ಅದು ಸಹ ವಿಶೇಷವಾಗಿ ರಜಾ ದಿನಗಳಲ್ಲಿ ಶಿಕ್ಷಕನಿಗೆ ಸಿಗುವಂತಹ ಬೇಸಿಗೆ ರಜೆಗಳನ್ನು ಸಹ ಸರ್ಕಾರ ಇತ್ತೀಚಿಗೆ ನೀಡದಿರುವುದು ವಿಷಾದನೀಯ

ಒಬ್ಬ ವೈದ್ಯ ಪ್ರಾಣ ಉಳಿಸಲು 24 ಗಂಟೆ ಕಾರ್ಯವನ್ನು ನಿರ್ವಹಿಸಿದಂತೆ ಒಬ್ಬ ಪೊಲೀಸ್ ಅಧಿಕಾರಿ ಜನರ ಹಿತಕ್ಕಾಗಿ ಸಮಾಜದಲ್ಲಿ ಯಾವುದೇ ಅಹಿತಕರ ಘಟನೆ ಯಾಗದಂತೆ ನೋಡಿಕೊಳ್ಳಲು ದಿನದ 24 ಗಂಟೆ ಕಾರ್ಯವನ್ನು ನಿರ್ವಹಿಸುತ್ತಾನೆ ಎಂಬಂತೆ ಶಿಕ್ಷಕನ ಸಹ ವರ್ಷದ 365 ದಿನಗಳು ಕೆಲಸ ಮಾಡುತ್ತಿರುವುದನ್ನು ಗಮನಿಸಬಹುದು ಪಾಠ ಮಾಡುವ ಸಮಯವನ್ನು ಶಿಕ್ಷಕರು ಹೆಚ್ಚಾಗಿ ಸರ್ಕಾರಿ ಹೇಳುತ್ತಿರುವ ಕೆಲಸಗಳನ್ನು ಮಾಡುವುದರಲ್ಲಿ ಸುಸ್ತಾಗುತ್ತಿದ್ದಾನೆ ಶನಿವಾರ ಭಾನುವಾರದ ರಜೆಗಳನ್ನ ಅನುಭವಿಸದೆ ಆ ಸಮಯವನ್ನು ಸಹ ವಿಶೇಷ ತರಗತಿಗಳನ್ನು ನಡೆಸುವಂತಹ ಪರಿಸ್ಥಿತಿ ಬಂದಿದೆ ನಾವು ಚಿಕ್ಕವರಿದ್ದಾಗ ದಸರಾ ರಜೆಗಳು ಬೇಸಿಗೆಕಾಲದ ರಜೆಗಳು ಬರುತ್ತಿದ್ದವು ಪರೀಕ್ಷೆಗಳನ್ನು ಮುಗಿಸಿಕೊಂಡು ಫಲಿತಾಂಶವನ್ನು ಪಡೆದುಕೊಂಡು ರಜಾ ದಿನಗಳನ್ನು ಕಳೆಯಲು ಅರ್ಜಿ ಅವರಿಗೆ ವಿಶೇಷ ಸ್ಥಳಗಳಿಗೆ ಭೇಟಿ ಕೊಡುವಂತಹ ಒಂದು ಕಾಲ ಇತ್ತು, ಆದರೆ ಪ್ರಸ್ತುತ ದಿನಗಳಲ್ಲಿ ಶಿಕ್ಷಕನಿಗೆ ದಸರಾ ಹಬ್ಬವನ್ನು ಕುಟುಂಬದವರೊಡನೆ ಆಚರಿಸಲು ಸಮಯವನ್ನು ನೀಡದಂತಾಗಿದೆ ಬೇಸಿಗೆಯ ಸಮಯದಲ್ಲಿ ಕುಟುಂಬದ ಸದಸ್ಯರೊಡನೆ ವಿಶ್ರಾಂತಿ ಪಡೆಯಲು ಸಹ ಸಮಯ ನೀಡದಂತಾಗಿದೆ ಈಗಾಗಲೇ ದ್ವಿತೀಯ ಪಿಯುಸಿಯ ಪರೀಕ್ಷೆಗಳ ಆರಂಭವಾಗಿವೆ ಕೆಲವು ಶಿಕ್ಷಕರನ್ನ ಪರೀಕ್ಷಾ ಕಾರ್ಯಗಳಿಗೆ ನಿಯೋಜಿಸುತ್ತದೆ ತದನಂತರ 10ನೇ ತರಗತಿಯ ಪರೀಕ್ಷೆಗಳು ಆರಂಭವಾಗುತ್ತವೆ ಆ ಕೆಲಸಗಳಿಗೆ ಮಾಡಲಾಗುತ್ತದೆ ತದನಂತರ ಮೌಲ್ಯಮಾಪನ ಕಾರ್ಯವನ್ನು ಮಾಡಲು ಸರ್ಕಾರ ಆದೇಶವನ್ನು ನೀಡುತ್ತದೆ ಅದನ್ನು ಸಹ ಮಾಡಿ ಇನ್ನೇನು ಬೇಸಿಗೆ ದಿನಗಳನ್ನು ನೆಂಟರೊಡನೆ ವಿಶೇಷ ಸಂದರ್ಭಗಳಲ್ಲಿ ಪಾಲ್ಗೊಳ್ಳುವ ಅವಕಾಶವನ್ನು ಸರ್ಕಾರ ಕಡಿತಗೊಳಿಸಿದಂತಾಗಿದೆ.

' ಈಗಾಗಲೇ ಸರ್ಕಾರವು ಬೇಸಿಗೆಯಲ್ಲಿ ಜನಗಣತಿಯನ್ನು ಶಿಕ್ಷಕರಿಂದ ಮಾಡಿಸಬೇಕು ಎಂಬ ನಿರ್ಣಯವನ್ನು ತೆಗೆದುಕೊಂಡಾಗಿದೆ ಸರ್ಕಾರ ಕೇಳುತ್ತದೆ ಈ ಒಂದು ಕೆಲಸವನ್ನು ಯಾರು ಮಾಡಬೇಕು ಶಿಕ್ಷಕರ ವಿದ್ಯಾವಂತರು ಅವರು ಗೆ ನೀಡಿರುವಂತಹ ಜವಾಬ್ದಾರಿಯನ್ನು ಚೆನ್ನಾಗಿ ನಿಭಾಯಿಸುತ್ತಾರೆ ಅದಕ್ಕಾಗಿ ಅವರನ್ನು ಈ ಒಂದು ಕಾರ್ಯಗಳಿಗೆ ನಿಯೋಜನೆ ಮಾಡುತ್ತೇವೆ ಎಂಬುದನ್ನು ಹೇಳುತ್ತಾರೆ ಸರಿ ಹಾಗಾದರೆ ಗ್ರಾಮೀಣ ಭಾಗದಲ್ಲಿ ಗ್ರಾಮ ಪಂಚಾಯಿತಿಗಳು ತಾಲೂಕ ಪ್ರದೇಶದಲ್ಲಿ ತಾಲೂಕ ಪಂಚಾಯಿತಿಗಳು ಮತ್ತು ತಾಲೂಕ ಆಡಳಿತಗಳು ವ್ಯವಸ್ಥೆ ಜಿಲ್ಲಾ ಹಂತದಲ್ಲಿ ಜಿಲ್ಲಾ ಪಂಚಾಯಿತಿಗಳು ಜಿಲ್ಲಾಧಿಕಾರಿಗಳ ಕಾರ್ಯಾಲಯದ ಅಧಿಕಾರಿಗಳು ಸರ್ಕಾರದ ಆ ದಿನದಲ್ಲಿ ಬರುವಂತಹ ವಿವಿಧ ಇಲಾಖೆಗಳ ಅಧಿಕಾರಿಗಳು ಅವರೇಕೆ ಬಳಸಿಕೊಳ್ಳುತ್ತಿಲ್ಲ ಸರ್ಕಾರದಿಂದ ನಡೆಯುತ್ತಿರುವ ನ್ಯಾಯ ಬಲ ಅಂಗಡಿಗಳಲ್ಲಿ ಜನರು ಪಡಿತರವನ್ನು ಪಡೆಯಲು ಬರುತ್ತಾರೆ ಬಂದಾಗ ಆ ನ್ಯಾಯಬೆಲೆ ಅಂಗಡಿಯ ಅವರು ತಮ್ಮ ಒಂದು ಚೌಕಟ್ಟಿನಲ್ಲಿ ಬರುವಂತಹ ಜನರ ಸಂಖ್ಯೆ ಅವರ ಜಾತಿ ಕುಟುಂಬದವರ ವಿದ್ಯಾರತಿ ನಮೂದಿಸಿಕೊಳ್ಳಬಹುದಲ್ಲವೇ ಸರಿ ಇದು ತುಂಬಾ ಕಷ್ಟವಾಗಿರಬಹುದು ಆಶಾ ಕಾರ್ಯಕರ್ತೆಯರನ್ನು ಈ ಒಂದು ಕೆಲಸಕ್ಕೆ ಬಳಸಿಕೊಳ್ಳಬಹುದಲ್ಲವೇ ಗ್ರಾಮ ಪಂಚಾಯಿತಿಯ ಅಧಿಕಾರಿಗಳು ಅಂದರೆ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ತಮ್ಮನ ಭೇಟಿಯಾಗಲು ಅನೇಕ ಜನರು ಬರುತ್ತಿರುತ್ತಾರೆ. ಅದರ ಬದಲಾಗಿ ಆ ಅಧಿಕಾರಿಗಳೇ ಒಂದು ನಿರ್ದಿಷ್ಟ ಸ್ಥಳವನ್ನು ನಿರ್ದಿಷ್ಟ ದಿನಾಂಕವನ್ನು ನಿರ್ದಿಷ್ಟ ಪ್ರದೇಶದ ಜನರನ್ನು ಕಾರ್ಯಾಲಯಕ್ಕಾಗಲಿ ಅಥವಾ ಅವರಿರುವ ಸ್ಥಳಕ್ಕೆ ಆಗಲಿ ಹೋಗಿ ಮಾಹಿತಿಯನ್ನು ಪಡೆಯಬಹುದಲ್ಲವೇ ಬೇಡ ಇದು ಸಹ ಕಷ್ಟಕರ ಕೆಲಸವೇ ಸರಿ ಇವರುಗಳನ್ನು ಯಾವುದೇ ಕಾರಣಕ್ಕೂ ಈ ಜನಗಣತಿಯ ಕಾರ್ಯದಲ್ಲಿ ಬಳಸಿಕೊಳ್ಳುವುದಿಲ್ಲ ಆದರೆ ಶಿಕ್ಷಕರು ಸರ್ಕಾರದ ಆದೇಶವನ್ನು ಪಾಲಿಸುವವರು ಬಡವರ್ಗದವರು ಒಂದು ವೇಳೆ ಸರ್ಕಾರ ಹೇಳಿದ ಕೆಲಸವನ್ನು ಮಾಡುತ್ತಿದ್ದರೆ ಅವರನ್ನು ಸಸ್ಪೆಂಡ್ ಮಾಡುತ್ತಾರೆಂಬ ಭಯದಿಂದ ಅವರಿಗೆ ಅನಾರೋಗ್ಯವಿದ್ದರೂ ಕುಟುಂಬದಲ್ಲಿ ಸಮಸ್ಯೆ ಇದ್ದರೂ ಯಾವುದು ಕಾರ್ಯಕ್ರಮಗಳಿದ್ದರೂ ಅವೆಲ್ಲವುಗಳನ್ನ ಬದಿಗೆಟ್ಟು ಸರ್ಕಾರವೇ ಹೇಳಿರುವಂತಹ ಮಾತುಗಳನ್ನು ಕೇಳುವಂತವರಾಗಿ ಬಿಟ್ಟಿದ್ದಾರೆ.

ನಿಜವಾಗಲೂ ಒಮ್ಮೊಮ್ಮೆ ಅನಿಸುತ್ತದೆ ಶಿಕ್ಷಕನಾಗುವುದು ಬೇಡ ಎಂದು ಸರ್ಕಾರ ಪುರಸಭೆ ನಗರಸಭೆ ಮಹಾನಗರ ಪಾಲಿಕೆ ಎಂದು ಚುನಾಯಿತ ಜನಪ್ರತಿನಿಧಿಗಳನ್ನು ಅಂದರೆ ಪುರಸಭೆ ಸದಸ್ಯರುಗಳನ್ನ ನಗರಸಭೆ ಸದಸ್ಯರುಗಳನ್ನ ಮಹಾನಗರ ಪಾಲಿಕೆಯ ಸದಸ್ಯರಗಳನ್ನ ಆಯ್ಕೆ ಮಾಡುತ್ತಾರೆ ಅದು ಜನರಿಂದನೇ ಆಯ್ಕೆಯೇ ಒಳಪಟ್ಟಿರುತ್ತಾರೆ ಆ ಒಂದು ಚುನಾವಣೆಯ ಸಂದರ್ಭದಲ್ಲಿ ಸ್ಪರ್ಧೆ ಮಾಡಿರುವಂತಹ ಎಲ್ಲಾ ಸ್ಪರ್ಧಾಳಗಳು ಪ್ರತಿ ಮನೆ ಇವ ನಮ್ಮ ಬೇರೆಯವ ಎಂಬ ಭಾವನೆ ಇಲ್ಲದೆ ಪ್ರತಿ ಮನೆಮನೆ ಅಂಗಳಕ್ಕೆ ಭೇಟಿಯನ್ನು ನೀಡುವಂತ ಇವರುಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಜನರ ಮಾಹಿತಿಯನ್ನು ಸರ್ಕಾರಕ್ಕೆ ನೀಡಲು ಕಷ್ಟಕರವೇ.


ಉದಾಹರಣೆಗೆ ಒಬ್ಬ ಪುರಸಭೆಯ ಸದಸ್ಯರಾಗಲು ತನ್ನ ವ್ಯಾಪ್ತಿಯಲ್ಲಿ ಬರುವಂತಹ ಜನರೊಡನೆ ಸಾರ್ವಜನಿಕ ವಹಿವಾಟನ್ನು ಇಟ್ಟುಕೊಂಡಿರುತ್ತಾನೆ. ತನ್ನನ್ನು ಚುನಾವಣೆಯಲ್ಲಿ ಗೆಲ್ಲಿಸಲಿ ಎಂದು ಪ್ರತಿ ಮನೆಮನೆಗೂ ಭೇಟಿಯನ್ನ ಮಾಡಿರುತ್ತಾನೆ ಆ ಕುಟುಂಬದಲ್ಲಿರುವ ಸದಸ್ಯರ ವಿವರಗಳನ್ನು



ಪಡೆದುಕೊಂಡಿರುತ್ತಾನೆ. ಆ ಕುಟುಂಬವು ಯಾವ ಧರ್ಮ ಜಾತಿಗೆ ಸೇರಿರುವುದು ಎಂಬುವ ಅರಿವು ಸಹ ಇರುತ್ತದೆ ಶೇಕಡಾ 90% ಕಾರ್ಯವನ್ನು ಪೂರ್ಣಗೊಳಿಸಿರುತ್ತಾನೆ ಆಯ್ಕೆ ಆಗಿರುವಂತಹ ಪುರಸಭೆ ಸದಸ್ಯ ನಿರ್ದಿಷ್ಟವಾದಂತ ಸಮಯ ಮತ್ತು ಸ್ಥಳವನ್ನು ಗೊತ್ತುಪಡಿಸಿ ಅವರ ಕುಂದು ಕೊರತೆಗಳ ಸಭೆಯನ್ನ ಅವರಿಗೆ ನೀಡಬೇಕಾಗಿರುವ ಮೂಲಭೂತ ಸೌಕರ್ಯಗಳನ್ನು ನೀಡಿದಾಗ ಆ ಸಾರ್ವಜನಿಕ ರು ಸರ್ಕಾರದ ಎಲ್ಲಾ ಸಹಕಾರವನ್ನು ಪಡೆದಾಗ ನಿರ್ದಿಷ್ಟವಾದಂತ ಮಾಹಿತಿಯನ್ನು ನಿಗದಿಪಡಿಸಿದ ಸ್ಥಳಕ್ಕೆ ಹೋಗಿ ಮಾಹಿತಿಯನ್ನು ನೀಡುವುದು ಕಷ್ಟಕರವೇ ಒಟ್ಟಿನಲ್ಲಿ ಹೇಳುವುದಾದರೆ ಶಿಕ್ಷಕನನ್ನ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುವಂತಹ ಕಾರ್ಯದಲ್ಲಿ ತೊಡಗಿಸಿಕೊಳ್ಳಲು ಅವಕಾಶವನ್ನ ನೀಡಿ ಹೊರತು ಶಿಕ್ಷಕರ ಮೇಲೆ ಒತ್ತಡವನ್ನ ಹಾಕಿ ಭಯದಿಂದ ಕೆಲಸವನ್ನು ಮಾಡಿಸಿಕೊಳ್ಳುವುದನ್ನ ಸರ್ಕಾರ ಕಡಿಮೆಗೊಳಿಸಬೇಕು ಎಂಬುದು



ನನ್ನ ಒಂದು ಕಳಕಳಿಯ ಮನವಿ ಆಗಿನ ಕಾಲದಲ್ಲಿ ಇರುವಂತಹ ಶಿಕ್ಷಕನ ಸ್ಥಾನಮಾ ನವನ್ನು ಈಗಿನ ಕಾಲದಲ್ಲಿ ಉಳಿಸಿ ಕೊಳ್ಳುವಂತೆ ಅವಕಾಶವನ್ನ ಮಾಡಿಕೊಡಿ.



**–ಡಾ. ರವಿರಾಜ್ ಡಿ...**

## ಮೊಜ್ತಬಾ ಖಮೇನಿ ಇರಾನ್‌ನ ಪರಮೋಚ್ಛ ನಾಯಕನಾಗಿ ಆಯ್ಕೆ



**ಟೆಹರಾನ್,ಮಾ,4–** ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ಒತ್ತಡದ ಮೇರೆಗೆ ಇರಾನ್‌ನ ತಜ್ಞರ ಸಭೆ ಹತ್ಯೆಗೀಡಾದ ಸುಪ್ರೀಂ ನಾಯಕ ಅಯತೊಲ್ಲಾ ಅಲಿ ಖಮೇನಿಯವರ ಪುತ್ರ ಮೊಜ್ತಬಾ ಖಮೇನಿ ಅವರನ್ನು ಇರಾನಿನಪರಮೋಚ್ಛ ನಾಯಕರನ್ನಾಗಿ ಆಯ್ಕೆ ಮಾಡಿದೆ.ಮುಂದಿನ ಸರ್ವೋಚ್ಚ ನಾಯಕನನ್ನು ಆಯ್ಕೆ ಮಾಡುವ ಜವಾಬ್ದಾರಿ ಹೊತ್ತಿರುವ ಹಿರಿಯಧರ್ಮಗುರುಗಳು ವಿನ್ನೂ ಚರ್ಚೆಯಲ್ಲಿ ನಿರತರಾಗಿದ್ದಾರೆ, ಈ ಸಂಬಂಧ ಯಾವುದೇ ಸ್ಪಷ್ಟ ಮಾಹಿತಿ ಇಲ್ಲ, ಮೊಜ್ತಬಾ ಖಮೇನಿ ಅವರೇ ಮುಂದಿನ ನಾಯಕನ ಆಯ್ಕೆಯಲ್ಲಿ ಮುಂಚೂಣಿಯಲ್ಲಿದ್ದಾರೆ ಎಂದು ಹೇಳಲಾಗಿದ್ದು ಈ ಬಗ್ಗೆ ಔಪಚಾರಿಕ ಪ್ರಕಟಣೆ ಬಾಕಿ ಉಳಿದಿದೆ

ಮೂವರು ಇರಾನಿನ ಅಧಿಕಾರಿಗಳನ್ನು ಉಲ್ಲೇಖಿಸಿ 88 ಸದಸ್ಯರ ತಜ್ಞರ ಸಭೆಯು ಎರಡು ವರ್ಚುವಲ್ ಸಭೆಗಳನ್ನು ನಡೆಸಿ ಉತ್ತರಾಧಿಕಾರದ ಕುರಿತು ಚರ್ಚೆ ನಡೆಸುತ್ತಿದ್ದು ಮುಂದಿನ ನಾಯಕನ್ನು ಆಯ್ಕೆ ಮಾಡಲಿದೆ ಎಂದು ಹೇಳಲಾಗಿದೆ

ಇರಾನ್‌ನ ಸರ್ವೋಚ್ಚ ನಾಯಕನ್ನಾಗಿ ಮೊಜ್ತಬಾ ಖಮೇನಿಯನ್ನು ಘೋಷಿಸುವ ಬಗ್ಗೆ ಧರ್ಮಗುರುಗಳು ಯೋಚಿಸುತ್ತಿದ್ದರು, ಆದರೆ ಕೆಲವು ಸದಸ್ಯರು ಅಂತಹ ಕ್ರಮ ಅವರನ್ನು ಅಮೆರಿಕ ಮತ್ತು ಇಸ್ರೇಲ್‌ಗೆ ಗುರಿಯಾಗಬಹುದು ಎನ್ನುವ ಅನುಮಾನದ ಹಿನ್ನೆಲೆಯಲ್ಲಿ ಈ ವಿಷಯ ಪ್ರಕಟಿಸಲು ಹಿಂದೇಟು ಹಾಕುತ್ತಿದ್ದಾರೆ ಎಂದು ಮಾಹಿತಿ ನೀಡಲಾಗಿದೆ

ಶಿಯಾ ಇಸ್ಲಾಂನ ಪ್ರಮುಖ ಧಾರ್ಮಿಕ ಕೇಂದ್ರಗಳಲ್ಲಿ ಒಂದಾದ ಕುಮ್‌ನಲ್ಲಿರುವ ಕಟ್ಟಡದ ಮೇಲೆ ಇಸ್ರೇಲ್ ದಾಳಿ ಮಾಡಿದೆ, ಈ ಕಟ್ಟದಲ್ಲಿ ಧಾರ್ಮಿಕ ನಾಯಕರು ಸಭೆ ಸೇರಿ ಮುಂದಿನ ನಾಯಕನ ಆಯ್ಕೆಗೆ ನಿರ್ಧರಿಸಿದ್ದರು, ದಾಳಿ ಹಿನ್ನೆಲೆಯಲ್ಲಿ ಸಭೆಯನ್ನು ಬೇರೆ ಕಡೆ ಬದಲಾಯಿಸಲಾಗಿದೆ.

ತಜ್ಞರ ಸಭೆಯು ಸರ್ವೋಚ್ಚ ನಾಯಕನನ್ನು ನೇಮಿಸಲು, ಮೇಲ್ವಿಚಾರಣೆ ಮಾಡಲು ಮತ್ತು ಅಗತ್ಯವಿದ್ದರೆ ವಜಾಗೊಳಿಸಲು ಸಾಂವಿಧಾನಿಕವಾಗಿ ಆದೇಶಿಸಲಾಗಿದೆ. ಇಸ್ಲಾಮಿಕ್ ಗಣರಾಜ್ಯದ 47 ವರ್ಷಗಳ ಇತಿಹಾಸದಲ್ಲಿ ದೇಹ ನಾಯಕನನ್ನು ಆಯ್ಕೆ ಮಾಡಲಿದೆ ಎಂದು ಹೇಳಲಾಗಿದೆ

"ಸಾರ್ವಜನಿಕರಲ್ಲಿ ಒಂದು ಭಾಗ ಈ ನಿರ್ಧಾರಕ್ಕೆ ನಕಾರಾತ್ಮಕವಾಗಿ ಮತ್ತು ಬಲವಾಗಿ ಪ್ರತಿಕ್ರಿಯಿಸುತ್ತದೆ ಮತ್ತು ಇದು ಪ್ರತಿಕ್ರಿಯೆಯನ್ನು ಹೊಂದಿರುತ್ತದೆ" ಎಂದು ಹೇಳಿದ್ದಾರೆ

## ಕರ್ನಾಟಕವನ್ನು ಸಾಲ ರಾಜ್ಯವನ್ನಾಗಿಸಿದ ಶತಮಾನದ ನಕಲಿ ಅರ್ಥಶಾಸ್ತ್ರಜ್ಞ ಸಿದ್ದರಾಮಯ್ಯ : ಆರ್.ಅಶೋಕ್



**ಬೆಂಗಳೂರು, ಮಾ.4–** ಸಾಲವೇ ಎಲ್ಲದಕ್ಕೂ ವಾಮಮಾರ್ಗ ಎಂದುಕೊಂಡಿರುವ ಈ ಶತಮಾನದ ನಕಲಿ ಅರ್ಥ ಶಾಸ್ತ್ರಜ್ಞ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರ್ನಾಟಕವನ್ನು ಸಾಲ ರಾಜ್ಯವನ್ನಾಗಿ ಪರಿವರ್ತಿಸಿದ್ದಾರೆ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಆರೋಪಿಸಿದ್ದಾರೆ.

ತಮ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ಸಾಲ– ಶೂಲದ ಹರಿಕಾರ ಸಾಲರಾಮಯ್ಯ ಅವರೇ, 2025–26ರ ಅಂತ್ಯದ ವೇಳೆಗೆ ರಾಜ್ಯದ ಒಟ್ಟು ಸಾಲದ ಮೊತ್ತ 8.14 ಲಕ್ಷ ಕೋಟಿಯಷ್ಟಾಗಲಿದೆ ಮತ್ತು ಇದು ರಾಜ್ಯದ ಜಿಎಸ್‌ಡಿಪಿಯ ಶೇ26.5ರಷ್ಟಾಗಲಿದೆ ಎಂದು ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ಅಂದಾಜಿಸಿದ್ದು, ಇದರಿಂದ 7 ಕೋಟಿ ಕರ್ನಾಟಕದ ತಲಾ ಸಾಲ 1,16,258 ರೂಪಾಯಿಗಳಿಗೆ ಏರಲಿದೆ ಎಂದು ಹೇಳಿದ್ದಾರೆ.

ತಮ ಕುರ್ಚಿ ಉಳಿಸಿಕೊಳ್ಳಲು ಸಾಲರಾಮಯ್ಯನವರು ಜಾರಿಗೆ ತಂದಿರುವ ಅವೈಜ್ಞಾನಿಕ ಗ್ಯಾರಂಟಿಗಳು, ಮಾಡಿರುವ ಸಾಲು ಸಾಲು ಹಗರಣಗಳು ಕನ್ನಡಿಗರ ಮೇಲೆ ಲಕ್ಷಾಂತರ ಕೋಟಿ ಸಾಲದ ಹೊರೆ ಹೊರಿಸಿ ಕರ್ನಾಟಕದ ಆರ್ಥಿಕ ಶಿಸ್ತನ್ನು ಹಳಿ ತಪ್ಪಿಸಿದೆ. ಸಾಲದ ಸುಳಿಗೆ ಕರುನಾಡು ಸಿಲುಕಿದೆ. ಕರ್ನಾಟಕ ಅಭಿವೃದ್ಧಿಯಲ್ಲಿ 20 ವರ್ಷ ಹಿಂದಕ್ಕೆ ಬಿದ್ದಿದೆ. ಆರ್ಥಿಕತೆ ಹಳ್ಳ ಹಿಡಿದಿದೆ ಎಂದು ವಾಗ್ದಾಳಿ ನಡೆಸಿದ್ದಾರೆ.

ಸಿಎಂ ಸಿದ್ದರಾಮಯ್ಯನವರೇ, ತಮ ಕೃಪೆಯಿಂದ ರಾಜ್ಯದ ಆರ್ಥಿಕ ಪರಿಸ್ಥಿತಿ ಈಗಾಗಲೇ ಪಾತಾಳಕ್ಕೆ ಕುಸಿದಿರುವಾಗ, ಯಾವ ಮುಖ ಇಟ್ಟುಕೊಂಡು ಈಗ ಇನ್ನೊಂದು ಬಜೆಟ್ ಮಂಡಿಸುತ್ತಿರಿ ಸ್ವಾಮಿ ಕನ್ನಡಿಗರ ಕ್ಷಮೆ ಕೇಳಿ, ರಾಜೀನಾಮೆ ಕೊಟ್ಟು ಹೊರಡಿ. ಕರ್ನಾಟಕವನ್ನು ಉಳಿಸಿ ಎಂದು ಅಶೋಕ್ ಒತ್ತಾಯಿಸಿದ್ದಾರೆ.

## ಅತಿ ವೇಗವಾಗಿ ಕಾರು ಓಡಿಸಿದ ಧೋನಿಗೆ ಬಿತ್ತು ದಂಡ

**ರಾಂಚಿ,ಮಾ.4–** ಅತಿ ವೇಗದ ಸಂಚಾರಕ್ಕಾಗಿ ಟೀಮ್ ಇಂಡಿಯಾದ ಮಾಜಿ ನಾಯಕ ಮಹೇಂದ್ರ ಸಿಂಗ್ ಧೋನಿ ಅವರಿಗೆ ರಾಂಚಿ ಸಂಚಾರಿ ಠಾಣೆ ಪೊಲೀಸರು ದಂಡ ವಿಧಿಸಿದ್ದಾರೆ.



ಮೋಟಾರು ವಾಹನ ಕಾಯ್ದೆ ಪ್ರಕಾರ ಎಂ.ಎಸ್.ಧೋನಿ ಅವರು ತಮ ನಿವೇಶನದ ಸಮೀಪವೇ ಅತಿ ವೇಗವಾಗಿ ಕಾರನ್ನು ಚಾಲನೆ ಮಾಡಿಕೊಂಡು ಹೋಗಿರುವುದು ಸಿಸಿಟಿವಿ ಕ್ಯಾಮೆರಾಗಳಲ್ಲಿ ಸೆರೆಯಾಗಿದೆ.

ಈ ಹಿನ್ನೆಲೆಯಲ್ಲಿ ರಾಂಚಿ ಸಂಚಾರಿ ಠಾಣೆ ಪೊಲೀಸರು 183 ಸೆಕ್ಷನ್‌ನಡಿ ಚೆನ್ನೈ ಸೂಪರ್ ಕಿಂಗ್ಸ್ ತಂಡದ ಆಟಗಾರನಿಗೆ ಡಿಜಿಟಲ್ ಚಲಾನ್ ಮೂಲಕ 1 ಸಾವಿರ ರೂ. ದಂಡ ವಿಧಿಸಿದೆ.

19ನೇ ಆವೃತ್ತಿಯ ಇಂಡಿಯನ್ ಪ್ರಿಮಿಯರ್ ಲೀಗ್‌ಗೆ ಧೋನಿ ಅವರು ಕಠಿಣ ತರಬೇತಿ ನಡೆಸುತ್ತಿದ್ದು, ಈ ಸಮಯದಲ್ಲೆ ಅವರು ವೇಗದ ಮಿತಿಯನ್ನು ಮೀರಿ ಕಾರನ್ನು ಚಲಾಯಿಸಿರುವುದು ಕಂಡುಬಂದಿದೆ.

## ಪರೀಕ್ಷೆಗೆ ಹೆದರಿ ಮನೆ ಬಿಟ್ಟು ಹೋದ ಇಬ್ಬರು ವಿದ್ಯಾರ್ಥಿನಿಯರು, ಆತಂಕದಲ್ಲಿ ಪೋಷಕರು

**ಬೆಂಗಳೂರು,ಮಾ.4–**ಈಗ ಪರೀಕ್ಷಾ ಸಮಯ ನಗರದ ಇಬ್ಬರು ಪಿಯುಸಿ ವಿದ್ಯಾರ್ಥಿನಿಯರು ಪರೀಕ್ಷೆಗೆ ಹೆದರಿ ಮನೆ ಬಿಟ್ಟು ಹೋಗಿದ್ದು, ಪೋಷಕರು ಆತಂಕಗೊಂಡಿದ್ದಾರೆ.ವಿದ್ಯಾರಣ್ಯಪುರದ ಎಂಎಸ್‌ಪಾಳ್ಯದ ನಿವಾಸಿ ತನಿಷ್ಕಾ (19) ದ್ವಿತಿಯ ಪಿಯುಸಿ ವ್ಯಾಸಂಗ ಮಾಡುತ್ತಿದ್ದು ಜ.31 ರಂದು ಯಲಹಂಕದಲ್ಲಿರುವ ಕಾಲೇಜಿಗೆ ಹೋದವರು ನಾಪತ್ತೆಯಾಗಿದ್ದಾಳೆ.

ಈಕೆಯೊಂದಿಗೆ ಪ್ರಥಮ ಪಿಯುಸಿ ವ್ಯಾಸಂಗ ಮಾಡುತ್ತಿರುವ ತೇಜಸ್ವಿನಿ (18) ಸಹ ಹೋಗಿದ್ದು, ಇವರಿಬ್ಬರು ಇದುವರೆಗೂ ಮನೆಗೆ ಹಿಂದಿರುಗಿಲ್ಲ.ತನಿಷ್ಕಾ ಕಳೆದ ವರ್ಷ ಪರೀಕ್ಷೆಯಿಂದ ತಪ್ಪಿಸಿಕೊಳ್ಳಲು ಕೈಗೆ ಗಾಯ ಮಾಡಿಕೊಂಡಿದ್ದಳು ಎಂಬುವುದು ಗೊತ್ತಾಗಿದೆ.

ಈ ಭಾರಿಯೂ ಪರೀಕ್ಷೆಗೆ ಹೆದರಿ ಮನೆ ಬಿಟ್ಟು ಹೋಗಿರಬಹುದೆಂದು ಆಕೆಯ ಕುಟುಂಬಸ್ಥರು ಶಂಕೆ ವ್ಯಕ್ತಪಡಿಸಿದ್ದಾರೆ.ಈ ಇಬ್ಬರು ವಿದ್ಯಾರ್ಥಿನಿಯರು ತಮ ಮೊಬೈಲ್‌ಗಳನ್ನು ಮನೆಯಲ್ಲೆ ಬಿಟ್ಟು ಹೋಗಿರುವುದರಿಂದ ಅವರ ಹುಡುಕಾಟ ಪೊಲೀಸರಿಗೆ ತಲೆ ನೋವಾಗಿ ಪರಿಣಮಿಸಿದೆ. ಅವರು ಆಧಾರಕಾರ್ಡ್ ಹಾಗೂ ಕಾಲೇಜು ಬ್ಯಾಗ್ ಮಾತ್ರ ತೆಗೆದುಕೊಂಡು ಹೋಗಿದ್ದಾರೆ. ತಮ



ಮಕ್ಕಳು ಕಾಣೆಯಾಗಿರುವ ಬಗ್ಗೆ ವಿದ್ಯಾರಣ್ಯಪುರ ಠಾಣೆ ಪೊಲೀಸರಿಗೆ ಅವರ ಪೋಷಕರು ದೂರು ನೀಡಿದ್ದಾರೆ.

15 ಪೊಲೀಸ್ ಅಧಿಕಾರಿ ಹಾಗೂ ಸಿಬ್ಬಂದಿ ನಾಲ್ಕು ತಂಡಗಳನ್ನಾಗಿ ಮಾಡಿಕೊಂಡು ರಾಜ್ಯದ ವಿವಿಧ ಭಾಗಗಳಲ್ಲಿ ಈ ಇಬ್ಬರು ವಿದ್ಯಾರ್ಥಿನಿಯರಿಗಾಗಿ ಹುಡುಕಾಟ ನಡೆಸುತ್ತಿದ್ದಾರೆ. ಈ ತಂಡ 'ಗಳು ಮಲ್ಕೆ ಮಹದೇಶ್ವರ, ಕೋಲಾರ, ಮೈಸೂರು, ಮಂಗಳೂರು ಸೇರಿದಂತೆ ವಿವಿಧ ಭಾಗಗಳಲ್ಲಿ ಹುಡುಕಾಡುತ್ತಿದ್ದಾರೆ.

ಈ ವಿದ್ಯಾರ್ಥಿನಿಯರು ಉಚಿತ ಬಸ್ ಪ್ರಯಾಣ ಸೌಲಭ್ಯವನ್ನು ಬಳಸಿಕೊಂಡು ಸುತ್ತಾಡುತ್ತಿರ ಬಹುದೆಂಬ ಅನುಮಾನ ವ್ಯಕ್ತವಾಗಿದೆ.ಈ ನಡುವೆ ಪೋಷಕರು ಎಲ್ಲೆ ಇದ್ದರೂ ಮನೆಗೆ ಸುರಕ್ಷಿತವಾಗಿ ಹಿಂದಿರುಗುವಂತೆ ಅಳಲು ತೋಡಿಕೊಂಡಿದ್ದಾರೆ.

# ಒಳಮೀಸಲಾತಿ ಅನುಷ್ಠಾನ ಮಾಡದಿದ್ದರೆ ಹೋರಾಟ ಅನಿವಾರ್ಯ : ಸರ್ಕಾರಕ್ಕೆ ವಿಜಯೇಂದ್ರ ಎಚ್ಚರಿಕೆ

**ಬೆಂಗಳೂರು,ಮಾ.4–** ಒಳಮೀಸಲಾತಿ ಅನ್ವಯ ಶೇ.56ರ ಮೀಸಲಾತಿಯಡಿಯಲ್ಲೆ ವಿವಿಧ ಸರ್ಕಾರಿ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಬೇಕು. ಇಲ್ಲದಿದ್ದರೆ ಮುಂದೆ ಆಗುವ ಎಲ್ಲಾ ಅನಾಹುತಕ್ಕೆ ಕಾಂಗ್ರೆಸ್ ಸರ್ಕಾರ ಕಾರಣವಾಗುತ್ತದೆ ಎಂದು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಎಚ್ಚರಿಕೆ ಕೊಟ್ಟಿದ್ದಾರೆ.

ಪಕ್ಷದ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಒಳಮೀಸಲಾತಿ ಅನುಷ್ಠಾನ ಕುರಿತು ಗುರುವಾರ ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಬಗ್ಗೆ ಸ್ಪಷ್ಟವಾದ ತೀರ್ಮಾನವನ್ನು ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದರು.

ಒಳಮೀಸಲಾತಿ ಪ್ರಕಾರ ಶೇ.56ರ ಮೀಸಲಾತಿ ಅಡಿಯೇ ಸರ್ಕಾರಿ ಹುದ್ದೆಗಳ ನೇಮಕಾತಿ ಮಾಡಿಕೊಳ್ಳಬೇಕೆಂದು ಪರಿಶಿಷ್ಟ ಸಮುದಾಯದ ಸಂಘಟನೆಗಳು ಸರ್ಕಾರಕ್ಕೆ ಒತ್ತಾಯಿಸಿವೆ.

ಗುರುವಾರ ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಸರ್ಕಾರದ ನಿರ್ಧಾರ ಹೊರಬೀಳದಿದ್ದರೆ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸುವುದಾಗಿ ಎಚ್ಚರಿಕೆಯನ್ನು ಕೊಟ್ಟಿದ್ದಾರೆ. ಒಂದು ವೇಳೆ ಏನಾದರೂ ಅನಾಹುತ ಸಂಭವಿಸಿದರೆ ಸರ್ಕಾರ ಹೊಣೆಯಾಗಬೇಕಾಗುತ್ತದೆ ಎಂದು ಹೇಳಿದರು.

ಹಿಂದಿನ ಮೀಸಲಾತಿ ಉಪಯೋಗಿಸಿಕೊಂಡು 54 ಸಾವಿರ ಹುದ್ದೆ ಭರ್ತಿ ಮಾಡುವುದಾಗಿ ಹೇಳಿದ್ದಾರೆ. ಒಂದೂವರೆ ಲಕ್ಷ ಉದ್ಯೋಗ ಭರ್ತಿ ಮಾಡದೆ, ಮೀಸಲಾತಿ ಅನುಷ್ಠಾನಕ್ಕೆ ತರದೆ ಹಳೆಯ ಶೇ.50ರ ಮೀಸಲಾತಿಯಡಿ ನೇಮಕಾತಿ ಮಾಡಿಕೊಳ್ಳ ಮುಂದಾಗಿದೆ. ಈ ಮೂಲಕ ಬೆಂಕಿ ಹಚ್ಚುವ ಕೆಲಸ ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು.

ಹಿಂದೆ ಬಿಜೆಪಿ ಅವಧಿಯಲ್ಲಿ 50 ರಿಂದ 56% ಮೀಸಲಾತಿ ನೀಡಿದ್ದೆವು. ಅದರ ಆಧಾರದ ಮೇಲೆ ನೇಮಕಾತಿ ಮಾಡಬೇಕು. ನಿಮ ಹಣಕಾಸು ಮುಗ್ಗಟ್ಟನ್ನು ಇಟ್ಟುಕೊಂಡು ಎಷ್ಟು ನೇಮಕ ಮಾಡುತ್ತಿರೋ ಮಾಡಿ. ಆದರೆ 56% ಒಳ ಮೀಸಲಾತಿ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಬೇಕು.

ಕುಂಟು ನೆಪ ಹೇಳದೆ ಉದ್ಯೋಗ ನೀಡುವ ಕೆಲಸ ಮಾಡಬೇಕು. ಶೋಷಿತ, ಪೀಡಿತ ಸಮುದಾಯಕ್ಕೆ ನ್ಯಾಯ ಕೊಡಬೇಕೆಂದು 30 ವರ್ಷಗಳಿಂದ ಮೀಸಲಾತಿ ವಿಚಾರವಾಗಿ ನ್ಯಾಯಯುತ ಹೋರಾಟ ಮಾಡಿಕೊಂಡು ಬಂದಿದ್ದವು. ಶೋಷಿತ ಸಮುದಾಯಕ್ಕೆ ನ್ಯಾಯ ಕೊಡುವ ಕೆಲಸ ಕಾಂಗ್ರೆಸ್ ಮಾಡಲಿಲ್ಲ. ನಮ ಸರ್ಕಾರದ ಅವಧಿಯಲ್ಲಿ ಎಸ್ಸಿ–ಎಸ್ಟಿ ಸಮುದಾಯಕ್ಕೆ ಶೇ.6ರಷ್ಟು ಮೀಸಲಾತಿ ಕೊಡುವ ಕೆಲಸ ಬೊಮಾಯಿ ಅವರ ಅಧಿಕಾರಾವಧಿಯಲ್ಲಿ ಮಾಡಲಾಗಿತ್ತು. ಆದರೆ ಕಾಂಗ್ರೆಸ್ ಸರ್ಕಾರಕ್ಕೆ ಮೂರು ವರ್ಷಗಳು ತುಂಬಿದೆ. ಸಿಎಂ ಸಿದ್ದರಾಮಯ್ಯ ಇಂತ ಗಂಭೀರ ವಿಚಾರವನ್ನ ಹಗುರವಾಗಿ ತೆಗೆದುಕೊಂಡಿದ್ದಾರೆ ಎಂದು ಆರೋಪಿಸಿದರು. ಯಾವುದೇ ಭರವಸೆ ನೀಡದೆ, ರಾಜ್ಯಪಾಲರ ಬಳಿ ಅಂಕಿತ ಕೂಡ ಹಾಕಿಸಿಕೊಂಡದ್ದಾರೆ. ಕಾಂಗ್ರೆಸ್ ಸರ್ಕಾರದ ಇಚ್ಛಾಶಕ್ತಿ ಕೊರತೆ ಇದೆ. ಹೈಕೋರ್ಟ್‌ನಲ್ಲಿ ವಾದ ಮಾಡದೆ ಸಮುದಾಯಕ್ಕೆ ದೊಡ್ಡ ದ್ರೋಹ ಮಾಡಿದ್ದಾರೆ ಎಂದು ದೂರಿದರು.

ಮಾಜಿ ಸಚಿವ ಶ್ರೀರಾಮುಲು ಮಾತನಾಡಿ, ಸಿದ್ದರಾಮಯ್ಯ ಸರ್ಕಾರ ಅಧಿಕಾರಕ್ಕೆ ಬರುವ ಮೊದಲು ವರ್ಷದಲ್ಲಿ ಒಂದು ಲಕ್ಷ ಹುದ್ದೆ ಭರ್ತಿ ಮಾಡುವುದಾಗಿ ಹೇಳಿದ್ದರು. ರಾಜ್ಯದಲ್ಲಿ 2.85 ಲಕ್ಷ ಹುದ್ದೆ ಖಾಲಿ ಇದೆ. ಖಾಲಿ ಹುದ್ದೆ ಭರ್ತಿ ಮಾಡುವಂತೆ ಯುವಕರು ಪ್ರತಿಭಟನೆ ಮಾಡುತ್ತಿದ್ದಾರೆ. 50 ಸಾವಿರ ಹುದ್ದೆ ಭರ್ತಿ ಮಾಡಲು ಸರ್ಕಾರ ಹೊರಟಿದೆ. ಈಗ ಮೀಸಲಾತಿಯಲ್ಲಿ ತೊಂದರೆ ಇದೆ ಎಂದು ಭರ್ತಿ ಮಾಡಿಲ್ಲ ಎಂದರು.

ಸಂವಿಧಾನ ಶಿಲ್ಪಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಜನಸಂಖ್ಯೆ ಆಧಾರದ ಮೇಲೆ ಮೀಸಲಾತಿ ಕೊಡಬೇಕು ಎಂದಿದ್ದರು. ಬಿಜೆಪಿ ಸರ್ಕಾರದಲಿ ನಾನು ಸಮಾಜ ಕಲ್ಯಾಣ ಇಲಾಖೆ ಸಚಿವನಾಗಿದ್ದಾಗ ಅದರಂತೆ ನಾವು ಮೀಸಲಾತಿ ಹೆಚ್ಚಳ ಮಾಡಿದ್ದೆವು. 17% ಮತ್ತು 7% ಗೆ ಮೀಸಲಾತಿ ಹೆಚ್ಚಿಸಿ, 24% ಎಸ್ಸಿ–ಎಸ್ಟಿ ಸಮುದಾಯಕ್ಕೆ ನೀಡಿದೆವು ಎಂದು ಹೇಳಿದರು.

ನೀವು ತಪ್ಪಿಸಿಕೊಳ್ಳುವ ಸಲುವಾಗಿ 50% ಮೀಸಲಾತಿ ಕೊಡಲು ಹೊರಟಿದ್ದೀರಿ.

ಹಿಂದುಳಿದ ವರ್ಗಗಳಿಗೆ ನೀವು ಹೇಗೆ ನ್ಯಾಯ ಕೊಡ್ತಿರಿ ಇಷ್ಟು ಗೊಂದಲದ ಗೂಡು ಮಾಡಿದ್ದೀರಿ. ನಮಗೆ 3% ಮೀಸಲಾತಿ



ಕೊಡುತ್ತಿರಾ? ಹಿಂದುಳಿದ ವರ್ಗಗಳಿಗೆ ಸಿಕ್ಕ ಅವಕಾಶ ಕಸಿದುಕೊಂಡಿದ್ದೀರಿ. ಮಕ್ಕಳ ಶಿಕ್ಷಣ, ಉದ್ಯೋಗ ಮೀಸಲಾತಿ ಕಸಿದುಕೊಳ್ಳುತ್ತಿದ್ದೀರಿ ಎಂದು ಪ್ರಶ್ನೆ ಮಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಾಗಮೋಹನ್ ದಾಸ್ ಕಮಿಟಿ ವರದಿ ನೀಡಲು ನೇಮಕ ಮಾಡಿದರು. ಅಂಬೇಡ್ಕರ್ ಅವರ ಸಂವಿಧಾನ ಪ್ರಕಾರ ಮೀಸಲಾತಿ ಕೊಡಬೇಕು. ಈ ಸರ್ಕಾರ ವರದಿಯನ್ನ ಅನುಷ್ಠಾನಕ್ಕೆ ತಂದಿಲ್ಲ. ಕಾಂಗ್ರೆಸ್ ಪಕ್ಷದಲ್ಲಿ 139 ಸೀಟು ಗೆದ್ದಿದ್ದಾರೆ. ಅದರಲ್ಲಿ ಎಸ್ಸಿ–ಎಸ್ಟಿ ಸಮುದಾಯದವರೇ ಹೆಚ್ಚಿದ್ದಾರೆ. ಆದರೂ ಅವರು ಪ್ರಶ್ನೆ ಮಾಡದೆ ಕುಳಿತಿದ್ದಾರೆ ಎಂದು ಕಿಡಿಕಾರಿದರು.

# ಸಂಸತ್ತಿನಲ್ಲಿ ಸಂಸದರ ಮೋದಿ ಭಜನೆ ಖಂಡಿಸಿದ ಜೈರಾಮ್ ರಮೇಶ್

**ತಿರುವನಂತಪುರಂ, ಮಾ. 4–** ಸಂಸತ್ತಿನಲ್ಲಿ ಪ್ರಧಾನಿ ನರೇಂದ್ರ ಮೋದಿಯವರನ್ನು ಅತಿಯಾಗಿ ಹೊಗಳುತ್ತಿರುವ ಬಿಜೆಪಿ ಸಂಸದರನ್ನು ಕಾಂಗ್ರೆಸ್ ನಾಯಕ ಮತ್ತು ಹಿರಿಯ ಸಂಸದ ಜೈರಾಮ್ ರಮೇಶ್ ತರಾಟೆಗೆ ತೆಗೆದುಕೊಂಡಿದ್ದಾರೆ.

ಅವರ ಕಾರ್ಯಗಳು ಕೆಲವೊಮ್ಮೆ ಅವರು ನಿರಂಕುಶ ಕಮ್ಯುನಿಸ್ಟ್ ರಾಷ್ಟ್ರವಾದ ಉತ್ತರ ಕೊರಿಯಾದ ಸುಪ್ರಿಂ ಪೀಪಲ್ಸ್ ಅಸೆಂಬ್ಲಿಯಲ್ಲಿ ಕುಳಿತಿರುವ ಭಾವನೆಯನ್ನು ನೀಡುತ್ತದೆ ಎಂದು ಅವರು ಪಿಟಿಐಗೆ ನೀಡಿದ ಸಂದರ್ಶನದಲ್ಲಿ ಹೇಳಿದ್ದಾರೆ.

ಅಮೆರಿಕ ಮತ್ತು ಇಸ್ರೆಲ್ ಪಡೆಗಳು ಇರಾನ್ ಮೇಲೆ ನಡೆಸಿದ ದಾಳಿಯ ನಂತರ ಭಾರತದ ವಿದೇಶಾಂಗ ನೀತಿಗೆ ಸಂಬಂಧಿಸಿದ ಪ್ರಶ್ನೆಗಳಿಗೆ ರಮೇಶ್ ಪ್ರತಿಕ್ರಿಯಿಸಿದರು, ವಿದೇಶಾಂಗ ವ್ಯವಹಾರಗಳು ಮತ್ತು ಹಣಕಾಸು ಸೇರಿದಂತೆ ದೇಶಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳನ್ನು ಒಬ್ಬ ವ್ಯಕ್ತಿ ನಿರ್ವಹಿಸುತ್ತಾರೆ ಎಂದು ಆರೋಪಿಸಿದರು.

ದೀರ್ಘಕಾಲದ ರಾಜ್ಯಸಭಾ ಸದಸ್ಯರಾಗಿರುವ ಅವರು, ಉತ್ತರ ಕೊರಿಯಾದ ಸಂಸತ್ತಿನಲ್ಲಿ ಕುಳಿತಿದ್ದೇನೆ ಎಂದು ಕೆಲವೊಮ್ಮೆ ಭಾವಿಸುವುದಾಗಿ ಹೇಳಿದರು ಅವರ ಸರ್ವೋಚ್ಚ ನಾಯಕ ಕಿಮ್ ಜಾಂಗ್ ಉನ್ ಪ್ರವೇಶಿಸಿದಾಗ ಎಸ್‌ಪಿಎ ಸದಸ್ಯರು ನವದೆಹಲಿಯಲ್ಲಿ ಭಾಷಣಗಳನ್ನು ಕೇಳಿದಾಗ ಅವರ ಕ್ರಮಗಳ ಉಲ್ಲೇಖ.ಇಂದು, ಇದು ಒನ್ ಮ್ಯಾನ್ ಶೋ. ಇದು ಒನ್ ಮ್ಯಾನ್ ಬ್ಯಾಂಡ್ ಆದ್ದರಿಂದ ಇದು ಪ್ರಧಾನಿಯವರ ವಿದೇಶಾಂಗ ನೀತಿ, ಇದು ಪ್ರಧಾನಿಯವರ ಬಜೆಟ್. ಎಲ್ಲವೂ ಪ್ರಧಾನಿಯೇ ಎಂದು ರಮೇಶ್ ಹೇಳಿದರು.

ಎಐಸಿಸಿ ಪ್ರಧಾನ ಕಾರ್ಯದರ್ಶಿ (ಸಂವಹನ) ಅವರು ಬೆಳಿಗ್ಗೆ ಸಂಸತ್ತಿನಲ್ಲಿ ಕುಳಿತಾಗ, ಮೊದಲು ಬಂದವರು ಮತ್ತು ಕೊನೆಯವರು ತಾವೇ ಎಂದು ಹೇಳಿದರು.ಹಿರಿಯ ನಾಯಕರು ತಾವು ಬಂದಿದ್ದೇವೆ, ನಿಯಮಿತವಾಗಿ ಮತ್ತು ಶ್ರದ್ಧೆಯಿಂದ ಕುಳಿತಿದ್ದೇವೆ ಮತ್ತು ದಿನವಿಡೀ ಅಲ್ಲೇ ಇದ್ದೇವೆ ಎಂದು ಹೇಳಿದರು.ಕೆಲವೊಮ್ಮೆ ನಾನು ಉತ್ತರ ಕೊರಿಯಾದ ಸಂಸತ್ತಿನಲ್ಲಿ ಕುಳಿತಿದ್ದೇನೆ ಎಂಬ ಭಾವನೆ ಬರುತ್ತದೆ.

ನಾನು ಬಿಜೆಪಿಯ ಜನರನ್ನು ಕೇಳುತ್ತೇನೆ. ವಿಷಯ ಏನೇ ಇರಲಿ, ಯಾವುದೇ ವಿಷಯವಿರಲಿ, ಭಾಷಣದ ಶೇಕಡಾ 90 ರಷ್ಟು ಪ್ರಧಾನಿಯನ್ನು ಹೊಗಳುತ್ತಿರುತ್ತದೆ. ವಿಷಯಕ್ಕೂ ಸಂಬಂಧವಿಲ್ಲ, ಮಸೂದೆಗೂ ಸಂಬಂಧವಿಲ್ಲ. ಅವರು ಪ್ರಧಾನಿಯನ್ನು ಹೊಗಳುತ್ತಿರುತ್ತಾರೆ.ಪ್ರಧಾನಿ ಪ್ರವೇಶಿಸಿದಾಗ, ಘೋಷಣೆಗಳನ್ನು ಕೂಗುತ್ತಾರೆ, ನಿಮಗೆ ತಿಳಿದಿದೆ, ಮೇಜು ಬಡಿದುಕೊಳ್ಳುವುದು, ಘೋಷಣೆಗಳನ್ನು ಕೂಗುವುದು, ಮೋದಿ, ಮೋದಿ, ಮೋದಿ. ಇದು ಭಾರತದ ಸಂಸತ್ತು, ಎಂದು ರಮೇಶ್ ಆರೋಪಿಸಿದರು.

ರಾಷ್ಟ್ರೀಯ ವಿಜಯೋತ್ಸವದ ಕ್ಷಣಗಳಲ್ಲಿಯೂ ಸಹ, ಅಂತಹ ದೃಶ್ಯಗಳು ಅಪರೂಪ ಎಂದು ಅವರು ಹೇಳಿದರು.1971 ರ ಪಾಕಿಸ್ತಾನದೊಂದಿಗಿನ ಯುದ್ಧವನ್ನು ಉಲ್ಲೇಖಿಸುತ್ತಾ, ಡಿಸೆಂಬರ್ 16, 1971 ರಂದು ಪಾಕಿಸ್ತಾನ ಶರಣಾದಾಗ ಮತ್ತು ದಿವಂಗತ ಅಟಲ್ ಬಿಹಾರಿ ವಾಜಪೇಯಿ ಅವರನ್ನು ದುರ್ಗಾ ಎಂದು ಕರೆದಾಗ ಆಗಿನ ಪ್ರಧಾನಿ ಇಂದಿರಾ ಗಾಂಧಿ ಅವರಿಂದ ಉತ್ಸಾಹಭರಿತ ಪ್ರತಿಕ್ರಿಯೆ ಬಂದಿರಬಹುದು ಎಂದು ಅವರು ಹೇಳಿದರು.

ಬಹುಶಃ ಆ ದಿನ ಎಲ್ಲರೂ ಅವರನ್ನು ಹುರಿದುಂಬಿಸುತ್ತಿದ್ದರು. ಆದರೆ ಇದು, ಅವರು ಒಳಗೆ ಬಂದಾಗಲೆಲ್ಲಾ ಮೋದಿ ಭಜನೆ, ಅವರು ಹೇಳಿದರು.ಇದು ಎಂದಿಗೂ ಸಂಭವಿಸಿಲ್ಲ. ನೆಹರೂ ಒಳಗೆ ಬಂದಾಗ, ಯಾರೂ ನೆಹರು, ನೆಹರು, ನೆಹರು ಎಂದು ಹೇಳಲಿಲ್ಲ ಎಂದು ರಮೇಶ್ ಹೇಳಿದರು, ಪ್ರಧಾನಿ ಮೋದಿಯವರ ವಿದೇಶಾಂಗ ನೀತಿಯ ಮೇಲೆ, ವಿಶೇಷವಾಗಿ ಪಶ್ಚಿಮ ಏಷ್ಯಾದ ಬೆಳವಣಿಗೆಗಳ ಸಂದರ್ಭದಲ್ಲಿ, ವ್ಯಾಪಕ ದಾಳಿಯನ್ನು ಪ್ರಾರಂಭಿಸಿದರು.

ಮೋದಿ ಸರ್ಕಾರವು ಇಸ್ರೆಲ್‌ನೊಂದಿಗೆ ಸಂಪೂರ್ಣವಾಗಿ ಮೈತ್ರಿ ಮಾಡಿಕೊಂಡಿದೆ ಎಂಬುದು ಬಹಳ ಸ್ಪಷ್ಟವಾಗಿದೆ. ಅದು (ಯುಎಸ್ ಅಧ್ಯಕ್ಷ ಡೊನಾಲ್ಡ್) ಟ್ರಂಪ್‌ಗೆ ಹೆದರುತ್ತದೆ. ಅದು ಇಸ್ರೆಲ್ ಅನ್ನು ಅಪ್ಪಿಕೊಂಡಿದೆ. ಇದು ತುಂಬಾ ದುರದೃಷ್ಟಕರ ಎಂದು ಅವರು ಹೇಳಿದರು.



ಇಸ್ರೆಲ್‌ನಲ್ಲಿ ಹಮಾಸ್ ನಡೆಸಿದ 2023 ರ ದಾಳಿಯನ್ನು ಉಲ್ಲೇಖಿಸುತ್ತಾ ರಮೇಶ್ ಹೇಳಿದರು: ಅಕ್ಟೋಬರ್ 7, 2023 ರಂದು ನಡೆದದ್ದು ಸಂಪೂರ್ಣವಾಗಿ ಸ್ವಿಕಾರಾರ್ಹವಲ್ಲ. ಅದರ ಬಗ್ಗೆ ಯಾವುದೇ ಸಂದೇಹವಿಲ್ಲ.ಆದಾಗ್ಯೂ, ಅವರು ಹೇಳಿದರು, ಇಸ್ರೆಲ್ ನಂತರ ಏನು ಮಾಡಿದೆ, ಮತ್ತು ಗಾಜಾ ಮತ್ತು ಇರಾನ್‌ನಲ್ಲಿ ಇಸ್ರೆಲ್ ಜೊತೆಗೆ ಅಮೆರಿಕ ಏನು ಮಾಡಲು ಬೆಂಬಲ ನೀಡಿದೆ, ಅದು ಕೂಡ ಅಷ್ಟೆ ಸ್ವಿಕಾರಾರ್ಹವಲ್ಲ. ಭಾರತವು ತನ್ನ ಸಾಂಪ್ರದಾಯಿಕ ನಿಲುವನ್ನು ಕೈಬಿಟ್ಟಿದೆ ಎಂದು ಅವರು ಆರೋಪಿಸಿದರು.

# ಮಧ್ಯಪ್ರಾಚ್ಯದಲ್ಲಿ ಯುದ್ಧ : ಕರ್ನಾಟಕದ ಆರ್ಥಿಕತೆಯ ಮೇಲೆ ವ್ಯಾಪಕ ಪರಿಣಾಮ ಬೀರುವ ಸಾಧ್ಯತೆ

**ಬೆಂಗಳೂರು,ಮಾ.4–** ಮಧ್ಯಪ್ರಾಚ್ಯದಲ್ಲಿ ಇರಾನ್ ದೇಶದ ಮೇಲೆ ಅಮೆರಿಕ ಮತ್ತು ಇಸ್ರೆಲ್ ಜಂಟಿಯಾಗಿ ನಡೆಸುತ್ತಿರುವ ಸತತ ದಾಳಿಯ ಪರಿಣಾಮ ಕರ್ನಾಟಕದ ಆರ್ಥಿಕತೆಯ ಮೇಲೆ ವ್ಯಾಪಕ ಪರಿಣಾಮ ಬೀರುವ ಸಾಧ್ಯತೆ ಇದೆ.

ಇರಾಕ್ ಮೇಲೆ ಇನ್ನು ನಾಲ್ಕು ವಾರಗಳ ಕಾಲ ದಾಳಿಯನ್ನು ಮುಂದುವರಿಸುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿರುವುದರಿಂದ ಸಹಜವಾಗಿ ಕರ್ನಾಟಕದ ಆರ್ಥಿಕ ಚಟುವಟಿಕೆಗಳ ಮೇಲೆ ದುಷ್ಟ ಪರಿಣಾಮ ಬೀರುವ ಸಂಭವವಿದೆ ಎಂದು ತಜ್ಞರು ಆತಂಕ ಹೊರ ಹಾಕಿದ್ದಾರೆ.

ರಾಜ್ಯ ಸರ್ಕಾರ ಕೂಡಲೇ ಪರ್ಯಾಯ ಕ್ರಮಗಳನ್ನು ತೆಗೆದುಕೊಳ್ಳದಿದ್ದರೆ ಆರ್ಥಿಕ ಹೊಡೆತ ಬೀಳಲಿದ್ದು ದೈನಂದಿನ ಚಟುವಟಿಕೆಗಳ ಮೇಲೆ ದುಷ್ಪರಿಣಾಮ ಬೀರಬಹುದು. ಈ ಉದ್ವಿಗ್ನ ಪರಿಸ್ಥಿತಿ ಮತ್ತಷ್ಟು ತೀವ್ರಗೊಂಡಿದ್ದೇ ಆದರೆ, ಅದರ ಪರಿಣಾಮ ಕರ್ನಾಟಕದ ಆರ್ಥಿಕತೆಯ ಮೇಲೆ ನೇರವಾಗಿ ಬೀಳುವ ಸಂಭವವನ್ನು ತಳ್ಳಿಹಾಕುವಂತಿಲ್ಲ.

ಭಾರತವು ಕಚ್ಚಾ ತೈಲದ ಅಗತ್ಯದ ಸುಮಾರು ಶೇ.90 ರಷ್ಟನ್ನು ಆಮದು ಮಾಡಿಕೊಳ್ಳುತ್ತದೆ. ಅಲ್ಲದೆ ಶೇ.60–65 ರಷ್ಟು ಎಲ್‌ಪಿಜಿ ಬೇಡಿಕೆ ಹಾಗೂ ಶೇ.60ರಷ್ಟು ಎಲ್‌ಎನ್‌ಜಿ ಆಮದು ಮಾಡಿಕೊಳ್ಳುತ್ತದೆ. ತೈಲ ಆಮದನ್ನೆ ನೆಚ್ಚಿಕೊಂಡಿರುವುದರಿಂದ ಆಮದು ವೆಚ್ಚ ಹೆಚ್ಚಳವಾಗಿ ಹಣದುಬ್ಬರದ ಒತ್ತಡಕ್ಕೂ ಕಾರಣ ಆಗಬಹುದು.

ಇದಕ್ಕಾಗಿ ಹೆಚ್ಚು, ಆಟೋ ಇಂಧನ (ಪೆಟ್ರೋಲ್–ಡೀಸೆಲ್) ಮತ್ತು ಎಲ್‌ಪಿಜಿಯನ್ನು ದೇಶೀಯ ಮಾರುಕಟ್ಟೆಗೆ ನೀಡುವಂತೆ ತೈಲ ಸಂಸ್ಕರಣಾಗಾರಗಳಿಗೆ ಸೂಚಿಸುವ ಸಾಧ್ಯತೆ ಇದೆ. ಕಚ್ಚಾ ತೈಲ ಪೂರೈಕೆಯಲ್ಲಾಗುವ ಅಡಚಣೆ ಸರಿದೂಗಿಸಲು ಸಂಸ್ಕರಣಾಗಾರರು ಪರ್ಯಾಯ ಮೂಲಗಳನ್ನೂ ಹುಡುಕುತ್ತಿದ್ದಾರೆ. ಜಾಗತಿಕ ಕಚ್ಚಾ ತೈಲ ಸರಬರಾಜು ಮಾರ್ಗಗಳಲ್ಲಿ ವ್ಯತ್ಯಯ ಉಂಟಾದರೆ ಪೆಟ್ರೋಲ್–ಡೀಸೆಲ್ ಬೆಲೆ ಏರಿಕೆಯಾಗುವ ಸಂಭವವಿದ್ದು, ಇದರಿಂದ ಸಾರಿಗೆ, ಕೃಷಿ, ರಫ್ತು ಮತ್ತು ಕೈಗಾರಿಕಾ ವಲಯಗಳು ಒತ್ತಡಕ್ಕೆ ಸಿಲುಕುವ ಸಾಧ್ಯತೆಗಳಿವೆ.

ಮೊದಲ ಹಂತದಲ್ಲೇ ರಾಜ್ಯದ ಸಾರಿಗೆ ಮತ್ತು ಕೃಷಿ ವಲಯಗಳಿಗೆ ಹೊಡೆತ ಬೀಳಬಹುಹುದೆಂದು ತಜ್ಞರು ಅಭಿಪ್ರಾಯ ಪಟ್ಟಿದ್ದಾರೆ.ರಾಜ್ಯದಲ್ಲಿ ಸರಕು ಸಾಗಾಣಿಕೆಯ ಶೇ.80ರಷ್ಟು ರಸ್ತೆ ಸಾರಿಗೆಯ ಮೇಲೆಯೇ ಅವಲಂಬಿತವಾಗಿದೆ. ಡೀಸೆಲ್ ಬೆಲೆಯಲ್ಲಿ ಸ್ವಲ್ಪ ಪ್ರಮಾಣದ ಏರಿಕೆಯಾದರೂ ಸಾರಿಗೆ ವೆಚ್ಚ ಹೆಚ್ಚಾಗಿ, ಅಗತ್ಯ ವಸ್ತುಗಳ ದರ ಏರಿಕೆಗೆ ಕಾರಣವಾಗುತ್ತದೆ. ಕರ್ನಾಟಕ ಪ್ರಮುಖ ಅಕ್ಕಿ ಉತ್ಪಾದನಾ ರಾಜ್ಯವಾಗಿದ್ದು, ಗಲ್ಫ್ ಪ್ರದೇಶಗಳಿಗೆ ರಫ್ತು ಮಾಡುವಲ್ಲಿ ದುಬೈ ಪ್ರಮುಖ ಟ್ರಾನ್ಸಿಟ್ ಕೇಂದ್ರವಾಗಿದೆ.

ಅಕ್ಕಿ, ಬೇಳೆ, ಮಸಾಲೆ ವಸ್ತುಗಳು ಸೇರಿದಂತೆ ಹಲವಾರು ಉತ್ಪನ್ನಗಳು ದುಬೈ ಮೂಲಕ ಪಶ್ಚಿಮ ಏಷ್ಯಾ, ಯುರೋಪ್ ಮತ್ತು ಇತರೆ ದೇಶಗಳಿಗೆ ಸಾಗುತ್ತವೆ.ಹಡಗು ಸಂಚಾರದಲ್ಲಿ ವಿಳಂಬ ಅಥವಾ ಬಂದರು ನಿರ್ಬಂಧ ಉಂಟಾದರೆ ರಫ್ತು ಚಟುವಟಿಕೆಗಳಿಗೆ ಅಡ್ಡಿಯಾಗಬಹುದು. ಕಚ್ಚಾ ವಸ್ತುಗಳ ಸರಬರಾಜಿನಲ್ಲಿ ವಿಳಂಬ ಉಂಟಾದರೆ ಉತ್ಪಾದನಾ ವೇಳಾಪಟ್ಟಿಗೆ ಧಕ್ಕೆಯಾಗಬಹುದು.

ತೈಲ ಬೆಲೆ ಏರಿಕೆಯ ಪರಿಣಾಮ ತಕ್ಷಣ ಗೋಚರಿಸದಿದ್ದರೂ, ಉದ್ವಿಗ್ನತೆ ಮುಂದುವರಿದರೆ ಕೆಲವು ವಾರಗಳಲ್ಲಿ ಅದರ ಪರಿಣಾಮ ತಿಳಿಯಲಿದೆ ಎನ್ನುತ್ತಾರೆ ತಜ್ಞರು.

ಕಚ್ಚಾ ತೈಲ ಸರಬರಾಜಿನಲ್ಲಿ ವ್ಯತ್ಯಯ ಉಂಟಾದರೆ ಪೆಟ್ರೋಲ್–ಡೀಸೆಲ್ ದರ ಏರಿಕೆ ಅನಿವಾರ್ಯ. ಇಂಧನ ದರ ಏರಿದರೆ ಎಲ್ಲಾ ಅಗತ್ಯ ವಸ್ತುಗಳ ಬೆಲೆಗಳು ಸಹಜವಾಗಿ ಏರಿಕೆಯಾಗುತ್ತವೆ.

ಸಾರಿಗೆ ವೆಚ್ಚವು ಆಹಾರ, ತರಕಾರಿ ಮತ್ತು ದೈನಂದಿನ ಬಳಕೆಯ ವಸ್ತುಗಳ ದರದ ಮೇಲೆ ನೇರವಾಗಿ ಪರಿಣಾಮ ಬೀರುತ್ತವೆ ಎಂದು ಬೆಂಗಳೂರು ಪೆಟ್ರೊಲಿಯಂ ಡೀಲರ್ಸ್ ಅಸೋಸಿಯೇಷನ್ ಹೇಳಿದೆ. ಇದಲ್ಲದೆ ಪ್ರವಾಸೋದ್ಯಮ ವಲಯದ ಮೇಲೂ ಪರಿಣಾಮ ಬೀರುವ ಸಾಧ್ಯತೆಗಳಿವೆ.

ತೈಲ ಬೆಲೆ ಏರಿಕೆಯಿಂದ ರೂಪಾಯಿ ಮೌಲ್ಯ ಕುಸಿತವಾಗುವ ಸಾಧ್ಯತೆ ಇದ್ದು, ಆಮದು ವೆಚ್ಚ ಹೆಚ್ಚಾಗಬಹುದು. ಉದ್ವಿಗ್ನತೆ ತೀವ್ರಗೊಂಡರೆ ಅದರ ಪರಿಣಾಮ ಕರ್ನಾಟಕದ ಆರ್ಥಿಕತೆ ಮೇಲೆ ಪರಿಣಾಮ ಬೀರಲಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಬೆಲೆ ಏರಿಕೆ ಎಷ್ಟಾಗಿದೆ? ಕಳೆದ ಜೂನ್‌ನಲ್ಲಿ ಇರಾನ್ ಮೇಲೆ ಇಸ್ರೆಲ್ ದಾಳಿ ಮಾಡಿದಾಗ ತೈಲವು ಬ್ಯಾರೆಲ್?ಗೆ 70 ಡಾಲರ್‌ನಿಂದ 80 ಡಾಲರ್‌ಗೆ ಏರಿತ್ತು. ಆಗ ತಜ್ಞರು 100–120 ಡಾಲರ್‌ಗೆ ತಲುಪಬಹುದು ಎಂದೇ ವಿಶ್ಲೆ?ಷಿಸಿದ್ದರು. ಆದರೆ, ಅದು ಕೇವಲ 12 ದಿನಗಳ ಯುದ್ಧವಷ್ಟೆ?. ಈ ಬಾರಿ ಯುದ್ಧ ಯಾವಾಗ ನಿಲ್ಲುವುದು ಎಂದು ಯಾರಿಗೂ ತಿಳಿದಿಲ್ಲ.

ಈಗ ಬ್ಯಾರೆಲ್?ಗೆ 72.8 ಡಾಲರ್ ಇದ್ದು ಯುದ್ಧ ಹೀಗೆ ಮುಂದುವರಿದರೆ ಅಂತಿಮವಾಗಿ 100 ಡಾಲರ್ ಮುಟ್ಟುವ ನಿರೀಕ್ಷೆಯಿದೆ. ಹಾರ್ಮುಜ್ ಜಲಸಂಧಿಯ ಮೂಲಕ ಪ್ರತಿದಿನ ಸುಮಾರು 20 ದಶಲಕ್ಷ ಬ್ಯಾರೆಲ್ ತೈಲ ಪೂರೈಕೆಯಾಗುತ್ತದೆ. ಈ ಪ್ರಮಾಣವು ಭಾರತ–ಚೀನಾ ಒಟ್ಟು ದೈನಂದಿನ ಬೇಡಿಕೆಗೆ ಸಮ. ಅದನ್ನು ಬದಲಾಯಿಸಲು ಯಾವುದೇ ಸುಲಭ



ಮಾರ್ಗವಿಲ್ಲ. ಅಮೆರಿಕದ ಒತ್ತಡದಿಂದಾಗಿ ಭಾರತವು ರಷ್ಯಾದ ಸರಬರಾಜುಗಳನ್ನು ತಗ್ಗಿಸಿದ ನಂತರ, ಇರಾಕ್ ಮತ್ತು ಸೌದಿ ಅರೇಬಿಯಾದಿಂದ ತೈಲದ ಮೇಲಿನ ಅವಲಂಬನೆ ಹೆಚ್ಚಾಗಿದೆ.

ಆದರೆ ಸದ್ಯಕ್ಕೆ ಭಾರತೀಯ ಕಂಪನಿಗಳು ಅಮೆರಿಕ ಸೇರಿದಂತೆ ಇತರ ಮೂಲಗಳಿಂದ ಎಲ್‌ಎನ್‌ಜಿ ಪಡೆಯಲು ಅವಕಾಶ ಇದೆ. ಹಡಗುಗಳನ್ನು ಕೂಡಾ ಸೂಯೆಜ್ ಕಾಲುವೆ ಮೂಲಕ ತರಿಸಿಕೊಳ್ಳಬಹುದಾಗಿದೆ. ಅಲ್ಲದೆ ಭಾರತಕ್ಕೆ ಪರ್ಯಾಯ ತೈಲ ಪೂರೈಕೆ ಮಾರ್ಗಗಳೂ ಇವೆ, ಅಲ್ಲದೆ ಯಾರೂ ಅನಿರ್ದಿಷ್ಟವಾಗಿ ಸರಬರಾಜು ನಿಲ್ಲಿಸುವುದಿಲ್ಲ ಎಂಬುದು ಅಧಿಕಾರಿಗಳ ಲೆಕ್ಕಾಚಾರವಾಗಿದೆ. ಆದರೆ, ಇಂದು ಸಂತಸದ ವಿಷಯ ಏನೆಂದರೆ, ತೈಲ ಕಂಪನಿಗಳು ಬೆಲೆ ಏರಿಕೆಯ ನಷ್ಟವನ್ನು ತಾವೇ ಭರಿಸಿ, ಬೆಲೆ ಇಳಿಕೆಯಾದಾಗ ಅದನ್ನು ಸರಿದೂಗಿಸಿಕೊಳ್ಳುವ ವಿಧಾನ ಅನುಸರಿಸುತ್ತದೆ.

ಗಮನಿಸಬೇಕಾದ ಅಂಶವೆಂದರೆ ಏಪ್ರಿಲ್ 2022 ರಿಂದ ಚಿಲ್ಲರೆ ಪೆಟ್ರೋಲ್, ಡೀಸೆಲ್ ಬೆಲೆಗಳಲ್ಲಿ ಯಾವುದೇ ಬದಲಾವಣೆ ಆಗಿಲ್ಲ ಎಂಬುದು ಗಮನಾರ್ಹ. ಹೀಗಾಗಿ ಚಿಲ್ಲರೆ ಡೀಸೆಲ್–ಪೆಟ್ರೋಲ್ ದರ ತಕ್ಷಣಕ್ಕೆ ಏರಿಕೆ ಆಗದಿರಬಹುದು, ಜನಸಾಮಾನ್ಯರು ತಕ್ಷಣವೇ ಬೆಲೆ ಏರಿಕೆಯ ಸಂಕಷ್ಟಕ್ಕೆ ಎದುರಾಗುವ ಸಾಧ್ಯತೆ ಕಡಿಮೆ ಎಂದೇ ಹೇಳಲಾಗಿದೆ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE